16 ಅಕ್ಟೋಬರ್ 2025 ಗುರುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 216 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಚಲನಚಿತ್ರ ನಟಿಯರಾದ ಜಯಮಾಲ, ಶೃತಿ, ಮಾಳವಿಕ ಅವಿನಾಶ್ ಅವರು ಬುಧವಾರ ಹಾಸನಾಂಬ ದೇವಿ ದರ್ಶನ ಪಡೆದರು.



ನೊಬೆಲ್ ಪ್ರಶಸ್ತಿ ಸುತ್ತ ಮುತ್ತ » 2



ಉದ್ಯಮಿಗಳೇ ರಸ್ತೆ ಗುಂಡಿ ಮುಚ್ಚುವುದಾದರೆ ಸರ್ಕಾರ ಏಕೆ ಬೇಕು » 3



ಒಳ ಮೀಸಲಾತಿ ಜಾರಿ ಭರವಸೆ : ಪ್ರತಿಭಟನೆ ವಾಪಾಸ್ » 4

# ವಿಪಕ್ಷದವರು ಎಷ್ಟು ಅನುದಾನ ಕೊಟ್ಟಿದ್ದರು

## ಜನರ ದಾರಿ ತಪ್ಪಿಸುವ ಕೆಲಸ ಮಾಡಬೇಡಿ | ಸ್ಥಳೀಯ ಸಂಸ್ಥೆ ಚುನಾವಣೆಗೆ ಸಿದ್ಧ : ಸಿದ್ದರಾಮಯ್ಯ

• ಪ್ರಜೋದಯ ವರದಿ

**ಹಾಸನ:** ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗುತ್ತಿದೆ ಎಂದು ಆರೋಪಿಸುತ್ತಿರುವ ಬಿಜೆಪಿ-ಜೆಡಿಎಸ್‌ನವರು ತಮ್ಮ ಆಡಳಿತಾವಧಿಯಲ್ಲಿ ಎಷ್ಟು ಕೊಟ್ಟಿದ್ದರೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶ್ನಿಸಿದರು.

ನಗರದ ಬೂವನಹಳ್ಳಿ ಹೆಲಿಪ್ಯಾಡ್‌ನಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನುದಾನ ಹಂಚಿಕೆಯಲ್ಲಿ ಪ್ರತಿಪಕ್ಷಗಳ ಶಾಸಕರಿಗೆ ಅನ್ಯಾಯ ಮಾಡಲಾಗಿದೆ ಎಂದು ನ್ಯಾಯಾಲಯ ಮೆಟ್ಟಿಲೇರಿದ್ದಾರೆ. ಅಲ್ಲೇ ತೀರ್ಮಾನವಾಗಲಿ ಬಿಡಿ. ಶಾಸಕರಿಗೆ ಅನುದಾನ ಎಷ್ಟು ಕೊಡಬೇಕು ಅಷ್ಟು ಕೊಟ್ಟಿದ್ದೇವೆ. ಏನೂ ಕೊಟ್ಟಿಲ್ಲವೆಂದು ಸುಳ್ಳು ಆರೋಪ ಮಾಡಬಾರದು. ಸಮ್ಮಿಶ್ರ ಸರ್ಕಾರದಲ್ಲಿ ಹಾಗು ಹಿಂದೆ ಬಿಜೆಪಿ ಅಧಿಕಾರದಲ್ಲಿದ್ದಾಗ ಎಷ್ಟು ಅನುದಾನ ಕೊಟ್ಟಿದ್ದಾರೆ. ಅವರು ಇದ್ದಾಗ ಅನುದಾನ ಕೊಡದೇ ಈಗ ಸುಮ್ಮನೆ ಆರೋಪ ಮಾಡುತ್ತಿದ್ದಾರೆ. ಅಧಿಕಾರದಲ್ಲಿದ್ದಾಗ ಏನೂ ಮಾಡದೆ ಈಗ ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

**ಚುನಾವಣೆಗೆ ನಾವು ಸಿದ್ಧ**

ಸ್ಥಳೀಯ ಸಂಸ್ಥೆ ಚುನಾವಣೆ ವಿಚಾರ ಕೋರ್ಟ್‌ನಲ್ಲಿದೆ. ನ್ಯಾಯಾಲಯ ಯಾವಾಗ ಹೇಳುತ್ತದೆಯೋ ಆಗ ಚುನಾವಣೆ ಮಾಡುತ್ತೇವೆ. ಬೆಂಗಳೂರು ಕಾರ್ಪೋರೇಷನ್ ಸೇರಿ ಜಿಲ್ಲಾ, ತಾಲ್ಲೂಕು ಪಂಚಾಯಿತಿ ಚುನಾವಣೆ ಆಗಬೇಕಿದೆ. ಒಂದೊಂದಾಗಿ ಚುನಾವಣೆ ನಡೆಸಬೇಕಿದೆ. ಪ್ರಜಾಪ್ರಭುತ್ವ ಚುನಾವಣೆಗಳಿಂದಲೇ ಗಟ್ಟಿಯಾಗುತ್ತದೆ. ನಾವು ಅದಕ್ಕೆ ಸಿದ್ಧರಾಗಿದ್ದೇವೆಂದರು.



ಸೋಮವಾರ ಆಯೋಜಿಸಿದ್ದ ಸಚಿವರ ಜೊತೆಗಿನ ಔತಣ ಕೂಟಕ್ಕೂ ರಾಜಕೀಯಕ್ಕೂ ಸಂಬಂಧ ಇಲ್ಲ. ನಾವು ಯಾವಾಗಲೂ ಸೇರುತ್ತೇವೆ. ಪಕ್ಷದ ವಿಚಾರದ ಬಗ್ಗೆ ಚರ್ಚೆ ಮಾಡುತ್ತೇವೆ. ಆಗಾಗ ಊಟಕ್ಕೆ ಸೇರುತ್ತೇವೆ. ಅದಕ್ಕೂ ಸಚಿವ ಸಂಪುಟ ವಿಸ್ತರಣೆಗೂ ಸಂಬಂಧವಿಲ್ಲ. ಸುಖಾ ಸುಮ್ಮನೆ ಯಾವ್ಯಾವುದಕ್ಕೂ ಹೋಲಿಕೆ ಮಾಡಬೇಡಿ ಎಂದರು.

### ಪರಿಹಾರಕ್ಕೆ ರೈತ ಸಂಘ ಮನವಿ

ಅತಿವೃಷ್ಟಿಯಿಂದ ಜಿಲ್ಲೆಯಲ್ಲಿ ಬೆಳೆ ನಷ್ಟ ಸಂಭವಿಸಿದ್ದು, ಕೂಡಲೇ ಪರಿಹಾರ ಬಿಡುಗಡೆ ಮಾಡಬೇಕೆಂದು ರೈತ ಸಂಘದ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಹೆಲಿಪ್ಯಾಡ್‌ನಲ್ಲಿ ರೈತ ಸಂಘದ ಪದಾಧಿಕಾರಿಗಳ ಮನವಿ ಆಲಿಸಿದ ಮುಖ್ಯಮಂತ್ರಿ, ನಷ್ಟಕ್ಕೀಡಾಗಿರುವ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರಿಗೆ ನಿರ್ದೇಶನ ನೀಡಿದರು.

ಸಚಿವ ಸಂಪುಟ ಪುನಾರಚನೆ ಕುರಿತು ಪ್ರತಿಕ್ರಿಯಿಸಿದ ಸಿದ್ದರಾಮಯ್ಯ ಅವರು, ಹೈಕಮಾಂಡ್ ಈಗ ಬಿಹಾರ ಚುನಾವಣೆ ಬಗ್ಗೆ ಗಮನ ಹರಿಸಿದೆ. ಅದು ಮುಗಿದ ಮೇಲೆ ನೋಡೋಣ, ಹೈ ಕಮಾಂಡ್ ಏನು ಹೇಳುತ್ತದೆಯೋ ಹಾಗೆಯೇ ಮಾಡೋಣ. ಸದ್ಯ ನವೆಂಬರ್ ಕ್ರಾಂತಿಯೂ ಇಲ್ಲ, ಯಾವ ಭ್ರಾಂತಿಯೂ ಇಲ್ಲವೆಂದು ಹಾಸ್ಯ ಚಟಾಕಿ ಹಾರಿಸಿದರು.

**ತಮಿಳುನಾಡು ಸರ್ಕಾರದಿಂದ ವರದಿ**

ಸರ್ಕಾರಿ ಶಾಲೆ ಅಥವಾ ಜಾಗದಲ್ಲಿ ಯಾವ ಚಟುವಟಿಕೆ ಮಾಡಬಾರದು. ಆರ್‌ಎಸ್‌ಎಸ್ ಮಾತ್ರವಲ್ಲ ಯಾವ ಸಂಘಟನೆಗಳಿಗೂ ಅವಕಾಶ ನೀಡಬಾರದು. ಆರ್‌ಎಸ್‌ಎಸ್ ಚಟುವಟಿಕೆಗೆ ನಿರ್ಬಂಧ ಹೇರುವ ಸಂಬಂಧ ಚರ್ಚೆ ನಡೆದಿದೆ. ತಮಿಳುನಾಡಿನಲ್ಲಿ ಈ ಬಗ್ಗೆ ನಿಯಮ ಮಾಡಿದ್ದಾರೆ. ಅದನ್ನು ಪರಾಮರ್ಶಿಸಿ ಮುಂದಿನ ಕ್ರಮ ಕೈಗೊಳ್ಳಲಾ ಗುವುದೆಂದರು.

ಎರಡನೇ ಬಾರಿಗೆ ಹಾಸನಾಂಬ ದರ್ಶನಕ್ಕೆ ಬಂದಿದ್ದೇನೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಕೆ.ಎಂ. ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್ ಅಧಿಕಾರಿಗಳು ಜೊತೆಗೂಡಿ ಉತ್ತಮ ಸಿದ್ಧತೆ ಮಾಡಿಕೊಂಡಿದ್ದಾರೆಂದು ಮೆಚ್ಚುಗೆ ಸೂಚಿಸಿದರು. ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ, ಶಾಸಕ ಕೆ.ಎಂ.ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್, ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ, ಮಾಜಿ ಸಚಿವ ಬಿ.ಶಿವರಾಮ್, ದಕ್ಷಿಣ ವಲಯ ಡಿಐಜಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾ ಧಿಕಾರಿ ಬಿ.ಆರ್.ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಮತ್ತಿತರರಿದ್ದರು.

## ಹಾಸನಾಂಬ ದೇವಾಲಯ ಭಾವೈಕ್ಯತೆ ಸ್ಥಳ : ಸಾಹಿತಿ ಬಾನುಮುಷ್ತಾಕ್

### ಹಾಸನಾಂಬ ದೇವಿ ದರ್ಶನ ಪಡೆದು, ಹೂ, ಬಳೆ ಸ್ವೀಕಾರ



• ಪ್ರಜೋದಯ ವರದಿ

**ಹಾಸನ:** ಬೂಕರ್ ಪ್ರಶಸ್ತಿ ವಿಜೇತೆ, ಸಾಹಿತಿ ಬಾನು ಮುಷ್ತಾಕ್ ಅವರು ಬುಧವಾರ ತಮ್ಮ ಪರಿವಾರ ಜೊತೆಗೂಡಿ ಹಾಸನಾಂಬ ದೇವಿ ಹಾಗು ಸಿದ್ದೇಶ್ವರಸ್ವಾಮಿ ದರ್ಶನ ಪಡೆದರು.

ಹಾಸನಾಂಬ ಗರ್ಭಗುಡಿ ಪ್ರವೇಶ ಮಾಡಿ ಪೂಜೆ ಸಲ್ಲಿಸಿದ ಅವರು, ಅರ್ಚಕರು ಪ್ರಸಾದ ರೂಪದಲ್ಲಿ ನೀಡಿದ ಮಲ್ಲಿಗೆ ಹೂ ಮುಡಿದು, ಹಸಿರು ಬಳೆಗಳನ್ನು ಧರಿಸಿಕೊಂಡು ದರ್ಶನೋತ್ಸವದಲ್ಲಿ ಭಾವೈಕ್ಯತೆ ಮೆರೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನಾಂಬ ದೇಗುಲ ಭಾವೈಕ್ಯತೆಯ ಸ್ಥಳ. ಹಾಸನಾಂಬ ಜಾತ್ರೆ ಎಂದರೇ ಅದು ನಮ್ಮೂರ ಹಬ್ಬವೆಂದು ಉತ್ಸಾಹದಿಂದ ಭಾಗವಹಿಸುತ್ತಿದ್ದಾರೆ. ಬಹಳ ಹಿಂದಿನಿಂದೂ ಮುಸ್ಲಿಮರು ಹಸನ್ ಬಿ ಹುಸೇನ್ ಬಿ ಎಂದು ನಂಬುವ ಕಾಲವಿತ್ತು. ನಮ್ಮ ಪೂರ್ವಿಕರು ಮುಸ್ಲಿಂ ಹೆಣ್ಣು ಮಕ್ಕಳನ್ನು ಕರೆದು ಕೊಂಡು ಬಂದು ಹೇಳಿ ಕೊಡುತ್ತಿದ್ದರು ಎಂದರು.

ಹಾಸನಾಂಬ ನಮ್ಮ ಮನೆ ಮುಂದಿನ ಬೀದಿಯಲ್ಲಿದೆ. ಇದು ಮೊದಲನೇ ಬಾರಿ ದರ್ಶನ ಪಡೆಯುತ್ತಿಲ್ಲ. ಚಿಕ್ಕಂದಿನಿಂದಲೂ ತಾಯಿಯ ಕೈ ಬೆರಳು ಹಿಡಿದುಕೊಂಡು ದೇವಿ ದರ್ಶನಕ್ಕೆ ಬರ್ತಿದ್ದೆ. ಆಗ ಯಾರಿಗೂ ಗೊತ್ತಾಗುತ್ತಿರಲಿಲ್ಲ, ಈಗ ಗೊತ್ತಾಗುತ್ತಿದೆ. ಹೆಚ್ಚಿನ ಭಕ್ತಿ, ಭಾವೈಕ್ಯತೆಯ ನೆಮ್ಮದಿಯ ತಾಣವಿದು. ಸ್ನೇಹ, ಪ್ರೀತಿ, ಸಹಬಾಳ್ವೆ, ಸಾಮಾಜಿಕ ಸಾಮರಸ್ಯ ಬೆಸೆಯುವ ಸ್ಥಳ. ಮುಸ್ಲಿಂ ಸಮುದಾಯದವರು ಹಿಂದೆ ಬಹಳಷ್ಟು ಮಂದಿ ಬರುತ್ತಿದ್ದರು. ಆಗ ಅವರ ಗ್ರಹಿಕೆ ಬೇರೆಯಾಗಿತ್ತು. ಈಗ ಮತ್ತೆ ದೇವಿಯ ದರ್ಶನಕ್ಕೆ ಸರ್ವ ಧರ್ಮದವರು ಬರುತ್ತಿದ್ದಾರೆಂದು ಹೇಳಿದರು.

## ಅ.26 ರಂದು ಶ್ರೀ ಕೆಂಚಾಂಬ ಚಿಕ್ಕ ಜಾತ್ರಾ ಮಹೋತ್ಸವ

• ಪ್ರಜೋದಯ ವರದಿ

**ಆಲೂರು :** ತಾಲ್ಲೂಕಿ ಕೆ.ಹೊಸಕೋಟೆ ಹೋಬಳಿ, ಹರಿಹಳ್ಳಿ ಗ್ರಾಮದ ಶ್ರೀ ಕೆಂಚಾಂಬ ದೇವಸ್ಥಾನದ ಚಾಲ್ತಿ ವರ್ಷದ ಚಿಕ್ಕ ಜಾತ್ರಾ ಮಹೋತ್ಸವವು ಅ.26 ರಂದು ನಡೆಯಲಿದೆ. ಭಕ್ತರು ಆಗಮಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕಾಗಿ ತಹಶೀಲ್ದಾರ್ ಅವರು ಕೋರಿದ್ದಾರೆ.

## ನಾಳೆ ಜಿಲ್ಲೆಗೆ ಹೆಚ್.ಡಿ.ಕೆ. ಭೇಟಿ

• ಪ್ರಜೋದಯ ವರದಿ

**ಹಾಸನ :** ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಅ.17ರಂದು ಕುಟುಂಬ ಸಮೇತರಾಗಿ ಆಗಮಿಸಿ ಹಾಸನಾಂಬ ಹಾಗು ಸಿದ್ದೇಶ್ವರಸ್ವಾಮಿ ದರ್ಶನ ಪಡೆಯಲಿದ್ದಾರೆ. ಶುಕ್ರವಾರ ಬೆಳಿಗ್ಗೆ ಪತ್ನಿ ಅನಿತ ಕುಮಾರಸ್ವಾಮಿ, ಪುತ್ರ ನಿಖಿಲ್ ಕುಮಾರಸ್ವಾಮಿ ಹಾಗು ಜೆಡಿಎಸ್‌ನ ಬಹುತೇಕ ಶಾಸಕರು ಆಗಮಿಸಿ ದೇವಿಯ ದರ್ಶನ ಪಡೆಯಲಿದ್ದಾರೆ.

# ರಾಜ್ಯದ ಸುಭಿಕ್ಷೆ, ಬೆಳೆ ಹಾನಿಯಾಗದಂತೆ ಪ್ರಾರ್ಥನೆ

## ಹಾಸನಾಂಬ ದರ್ಶನ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ

• ಪ್ರಜೋದಯ ವರದಿ

**ಹಾಸನ:** ರೈತರು ಬೆಳೆದ ಬೆಳೆ ಕೈ ಸೇರಬೇಕು, ಮುಂದಿನ ವರ್ಷ ಯಾವುದೇ ಹಾನಿಯಾಗದಂತೆ, ರಾಜ್ಯದ ಸುಭಿಕ್ಷೆ ಜೊತೆಗೆ ನಾಡಿನ ಜನರಿಗೆ ಶಾಂತಿ, ನೆಮ್ಮದಿ ಕರುಣಿಸಲಿ ಎಂದು ಹಾಸನಾಂಬ ದೇವಿಯಲ್ಲಿ ಪ್ರಾರ್ಥನೆ ಮಾಡಿದ್ದೇನೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಬುಧವಾರ ಹಾಸನಾಂಬ ಮತ್ತು ಸಿದ್ದೇಶ್ವರಸ್ವಾಮಿ ದೇವರ ದರ್ಶನ ಪಡೆದ ಬಳಿಕ ಮಾತನಾಡಿದ ಅವರು, ಸಮಾಜದಲ್ಲಿ ಎಲ್ಲರೂ ಪರಸ್ಪರ ಪ್ರೀತಿಯಿಂದ ಬಾಳಲಿ, ಯಾರನ್ನು ದ್ವೇಷಿಸಬಾರದು, ಎಲ್ಲಾ ಧರ್ಮಗಳಲ್ಲಿಯೂ ಕೂಡ ಅದನ್ನೇ ಹೇಳಲಾಗಿದೆ. ರಾಜ್ಯದ ಜನರಿಗೆ ಆಯಸ್ಸು, ಆರೋಗ್ಯ, ಶಾಂತಿ, ನೆಮ್ಮದಿ ನೀಡಲಿ. ಕುವೆಂಪು ಅವರು ಹೇಳಿರುವಂತೆ ಸರ್ವ ಜನಾಂಗದ ಶಾಂತಿಯ ತೋಟದಂತೆ ಬಾಳುವ ಬುದ್ದಿ ನೀಡಲಿ ಎಂದು ಪ್ರಾರ್ಥಿಸಿ ದ್ದೇನೆಂದರು.

ಈ ಬಾರಿ ಉತ್ತಮ ಮಳೆಯಾಗಿ ಜಲಾಶಯಗಳು ತುಂಬಿವೆ. ಕೆಲವು ಕಡೆ ಪ್ರವಾಹ ಬಂದು ಬೆಳೆ ನಷ್ಟವಾಗಿದೆ. ಈಗಾಗಲೇ ನಾನು, ಕಂದಾಯ ಸಚಿವ ಕೃಷ್ಣಬೈರೇಗೌಡ, ಕೃಷಿ ಸಚಿವ ಚೆಲುವರಾಯಸ್ವಾಮಿ ಅವರೊಂದಿಗೆ ಪರಿಶೀಲನೆ ನಡೆಸಿದ್ದೇವೆ. ರೈತರಿಗೆ ಸಹಾಯ ಮಾಡಲು ಎನ್‌ಡಿಆರ್‌ಎಫ್ ಹಾಗು ಸರ್ಕಾರದ ವತಿಯಿಂದ ಒಂದು ಹೆಕ್ಟೇರ್‌ಗೆ ಖುಷ್ಕಿ ಬೆಳೆಗೆ 17,000ರೂ., ನೀರಾವರಿ ಬೆಳೆಗೆ 25,500 ರೂ., ಬಹು ಬೆಳೆಗೆ 31,000ರೂ. ಪರಿಹಾರ ನೀಡಲಾಗುತ್ತಿದೆ. ರೈತರು ಬೆಳೆದ ಬೆಳೆ ಕೈಗೆ ಸಿಗಬೇಕು. ಮುಂದಿನ ವರ್ಷ ಯಾವುದೇ ಹಾನಿಯಾಗದಂತೆ ದೇವರಲ್ಲಿ ಪ್ರಾರ್ಥನೆ ಮಾಡಿದ್ದೇನೆಂದು ತಿಳಿಸಿದರು.



ನಾನು ಕಳೆದ ವರ್ಷವೂ ಹಾಸನಾಂಬ ದರ್ಶನಕ್ಕೆ ಬಂದಿದ್ದೆ. ಈ ವರ್ಷವೂ ಬಂದಿದ್ದೇನೆ. ದೇವಿ ದರ್ಶನಕ್ಕೆ ನಾಡಿನಾದ್ಯಂತ ಜನರು ಆಗಮಿಸುತ್ತಿದ್ದಾರೆ. ಪ್ರತಿಯೊಬ್ಬರು ಹಾಸನಾಂಬ ದೇವಿ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ದರ್ಶನ ಪಡೆಯಬೇಕು ಯಾರು ನಿರಾಸೆಯಿಂದ ಹೋಗಬಾರದು. ವೈಯಕ್ತಿಕವಾಗಿ ಏನು ಬೇಡಿಕೊಂಡಿದ್ದೀರಿ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ನನಗೂ, ನಮ್ಮ ಸರ್ಕಾರಕ್ಕೆ, ಸಚಿವರಿಗೆ, ಶಾಸಕರಿಗೆ, ಸಂಸದರಿಗೂ ಒಳ್ಳೆಯದಾಗಲಿ ಎಂದು ಬೇಡಿಕೊಂಡಿದ್ದೇನೆಂದರು.

ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ಗೃಹ ಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್, ಹೂಡ ಅಧ್ಯಕ್ಷ ಪಟೇಲ್ ಶಿವಪ್ಪ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ, ದೇವಸ್ಥಾನದ ಆಡಳಿತಾಧಿಕಾರಿ ಮಾರುತಿ ಹಾಜರಿದ್ದರು.

### ಹೆಚ್ಚುವರಿ ಅನುದಾನಕ್ಕೆ ಕ್ರಮ

ಹಾಸನಾಂಬ ದೇವಾಲಯದ ಸುತ್ತಮುತ್ತ ಭೂಸ್ವಾಧೀನಕ್ಕೆ ಬಜೆಟ್‌ನಲ್ಲಿ ಮೀಸಲಿಡುವಂತೆ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ ಅವರು, ಈ ಬಗ್ಗೆ ಜಿಲ್ಲಾಳಿತದ ಜೊತೆ ಚರ್ಚಿಸುತ್ತೇನೆ. ಅಗತ್ಯವಿದ್ದರೆ ಅನುದಾನ, ಹಣಕಾಸಿನ ನೆರವು ನೀಡುವ ಭರವಸೆ ನೀಡಿ, ಹಾಸನಾಂಬ ಜಾತ್ರೆಯಲ್ಲಿ ಯಾವುದೇ ರೀತಿಯ ಪ್ರತಿಷ್ಠೆಗೆ ಮಣೆ ಹಾಕದೆ, ಸಾಮಾನ್ಯ ಭಕ್ತ ದರ್ಶನಕ್ಕೆ ಆದ್ಯತೆ ನೀಡಿದ ಪ್ರಯತ್ನದ ಯಶಸ್ಸಿಗೆ ಸಹಕರಿಸಿದ ಜಿಲ್ಲೆಯ ಎಲ್ಲಾ ಪಕ್ಷದ ಜನಪ್ರತಿನಿಧಿಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು.

# ಚಿನ್ನಾಭರಣ ದೋಚಿ ವೃದ್ಧೆ ಕೊಂದ ದುಷ್ಕರ್ಮಿಗಳು

## ಚನ್ನರಾಯಪಟ್ಟಣದಲ್ಲಿ ಅಮಾನವೀಯ ಘಟನೆ | ತಾಯಿ-ಮಗನ ಬಂಧನ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ಮಲ್ಲವನಘಟ್ಟ ಸಮೀಪದ ಹೇಮಾವತಿ ನಾಲೆಯಲ್ಲಿ ಅ. 12ರಂದು ಪತ್ತೆಯಾದ ವೃದ್ಧೆಯ ಮೃತದೇಹ ಪ್ರಕರಣಕ್ಕೆ ಮಹತ್ವದ ತಿರುವು ಸಿಕ್ಕಿದ್ದು, ಪರಿಚಿತರೇ ಚಿನ್ನಾಭರಣ ದೋಚಿ ಹತ್ಯೆಗೈದು ನಾಲೆಗೆ ಎಸೆದಿರುವುದು ದೃಢಪಟ್ಟಿದೆ.

ತಾಲ್ಲೂಕಿನ ದೊಡ್ಡಗನ್ನಿ ಗ್ರಾಮದ ರಾಜಮ್ಮ (72) ಮೃತರು. ಸಾಸಲುಪುರ ಗ್ರಾಮದ ರಸ್ತೆ ಮನೆಯ ರಾಜಲಕ್ಷ್ಮಿ ಹಾಗು ಆಕೆಯ ಪುತ್ರ ಹೇಮಂತ್ ಬಂಧಿತರು. ಅ.10ರಂದು ಮಧ್ಯಾಹ್ನ 1 ಗಂಟೆ ಸಮಯದಲ್ಲಿ ಪುತ್ರ ದೊರೆಸ್ವಾಮಿ ರಾಜಮ್ಮ ಅವರನ್ನು ಪಟ್ಟಣದ ನವೋದಯ ಬಸ್ ನಿಲ್ದಾಣದ ಬಳಿ ಬಿಟ್ಟು ಊರಿಗೆ ಹೋಗುವಂತೆ ಹೇಳಿದ್ದ. ಆದರೆ, ರಾಜಮ್ಮ ಮನೆಗೆ ಹೋಗದೆ ಶ್ರೀನಿವಾಸಪುರ ಸಕ್ಕರೆ ಕಾರ್ಖಾನೆ ಸಮೀಪ ಬಸ್ ಇಳಿದು ರಾಜಲಕ್ಷ್ಮಿ ಅವರ ಮನೆಗೆ ತೆರಳಿದ್ದರು. ಸಂಜೆಯಾದರೂ ಮನೆಗೆ ಬಂದಿರಲಿಲ್ಲ. ತಾಯಿ ಮನೆಗೆ ಬಾರದೆ ಇದ್ದರಿಂದ ಎಲ್ಲಾ ಕಡೆ ಹುಡುಕಿದ್ದ ದೊರೆಸ್ವಾಮಿ ನಗರ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿದ್ದರು.

**ನಾಲೆಯಲ್ಲಿ ಶವ ಪತ್ತೆ**

ಅ.12 ರಂದು ಮಲ್ಲವನಘಟ್ಟ ಹೇಮಾವತಿ ನಾಲೆಯಲ್ಲಿ ಮಹಿಳೆಯೊಬ್ಬರ ಶವ ತೇಲಿ ಬರುತ್ತಿದೆ ಎಂದು ಸುದ್ದಿ ತಿಳಿದು ದೊರೆಸ್ವಾಮಿ ಹಾಗು ಸಂಬಂಧಿಕರು ತೆರಳಿ ಪರಿಶೀಲಿಸಿದಾಗ ಮೃತರು ರಾಜಮ್ಮ ಎನ್ನುವುದು ಗೊತ್ತಾಗಿದೆ. ಶವವನ್ನು ನೀರಿನಿಂದ ಹೊರ ತೆಗೆದು ನೋಡಿದಾಗ ರಾಜಮ್ಮ ಅವರ ತಲೆಯ ಎಡಭಾಗದಲ್ಲಿ ಗಾಯವಾದಂತೆ ಕಂಡುಬಂದಿದೆ. ಕಣ್ಣು, ಮೂಗಿನ ಭಾಗಕ್ಕೆ ಜಲಚರ ಪ್ರಾಣಿಗಳು ಕಚ್ಚಿರಬಹುದು. ರಾಜಮ್ಮ ಅವರು ನೀರಿಗಿಳಿದಾಗ ಕಾಲು ಜಾರಿ ಬಿದ್ದಿರಬಹುದು ಅಥವಾ ಯಾರಾದರೂ ತಳ್ಳಿರಬಹುದೆಂದು ಯುಡಿಆರ್ ಪ್ರಕರಣ ದಾಖಲಿಸಲಾಗಿತ್ತು. ಮರಣೋತ್ತರ ಪರೀಕ್ಷೆಗಾಗಿ ಮೃತದೇಹವನ್ನು ಹಿಮ್ಸ್‌ಗೆ ರವಾನಿಸಲಾಗಿತ್ತು.

**ಆಯುಧದಿಂದ ಹೊಡೆದು ಕೊಲೆ**

ಮರಣೋತ್ತರ ಪರೀಕ್ಷೆಯಲ್ಲಿ ರಾಜಮ್ಮ ಅವರ ಮೇಲೆ ಕಬ್ಬಿಣದ ಬಲವಾದ ಆಯುಧದಿಂದ ಹೊಡೆದು ಸಾಯಿಸಲಾಗಿದೆ ಎಂಬುದು ಸಾಬೀತಾಗಿದೆ. ವರದಿ ಆಧರಿಸಿ ಕುಟುಂಬಸ್ಥರ ವಿಚಾರಣೆ ನಡೆಸಿದಾಗ ರಾಜಮ್ಮ ಅವರು ಯಾವಾಗಲೂ ಚಿನ್ನದ ಮಾಂಗಲ್ಯ ಸರ, ಕಿವಿಯೋಲೆ ಹಾಗು ಮೂಗುನತ್ತು ಧರಿಸುತ್ತಿದ್ದರು. ನಾಲೆಯಲ್ಲಿ ಸಿಕ್ಕ ಶವ ನೋಡಿದಾಗ ಮೂಗುನತ್ತು ಹೊರತುಪಡಿಸಿ ಉಳಿದ ಆಭರಣ ಇರಲಿಲ್ಲ. ಯಾರೋ ಚಿನ್ನಾಭರಣ ದೋಚಿ ಹೊಡೆದು ಸಾಯಿಸಿದ್ದಾರೆಂದು ಅನುಮಾನ ವ್ಯಕ್ತಪಡಿಸಿದರು. ಮರಣೋತ್ತರ ವರದಿ ಹಾಗು ಕುಟುಂಬಸ್ಥರ ಹೇಳಿಕೆ ಆಧರಿಸಿ ನಗರ ಠಾಣೆ ಪಿಎಸ್‌ಐ ರತ್ನಕುಮಾರ್ ಅವರು ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

**ಸಾಲ ಕೊಟ್ಟಿದ್ದ ರಾಜಮ್ಮ**

ಮೃತ ರಾಜಮ್ಮ ಅವರು ಸಾಸಲಪುರ ಗ್ರಾಮದ ರಸ್ತೆಯಲ್ಲಿರುವ ಮನೆಯ ರಾಜಲಕ್ಷ್ಮಿ ಎಂಬುವವರಿಗೆ ಸಾಲ ಕೊಟ್ಟಿದ್ದರು. ಅದನ್ನು ಕೇಳುವುದಕ್ಕಾಗಿ ಯಾವಾಗಲೂ ಅವರ ಮನೆಗೆ ಹೋಗುತ್ತಿದ್ದರು. ಅ.10 ರಂದು ಸಹ ಅಲ್ಲಿಗೆ ತೆರಳಿದ್ದರು. ಆ ಬಳಿಕ ನಾಪತ್ತೆಯಾಗಿದ್ದರು. ಕೊಟ್ಟ ಹಣ ಮರಳಿಸುವಂತೆ ಕಿರುಕುಳ ನೀಡುತ್ತಿದ್ದರಿಂದ ಆಕ್ರೋಶಗೊಂಡ ರಾಜಲಕ್ಷ್ಮಿ ಹಾಗು ಆಕೆಯ ಪುತ್ರ ಹೇಮಂತ್ ಆಯುಧದಿಂದ ಹೊಡೆದು ಸಾಯಿಸಿದ್ದರು. ನಂತರ ಸಾಕ್ಷ್ಯ ನಾಶಕ್ಕಾಗಿ ಅದೇ ದಿನ ರಾತ್ರಿ ಹೇಮಾವತಿ ನಾಲೆಗೆ ಶವ ಎಸೆದಿದ್ದರು. ರಾಜಮ್ಮ ಅವರ ಮೈಮೇಲಿದ್ದ ಚಿನ್ನಾಭರಣವನ್ನು ಮಾರನೇ ದಿನ ಫೈನಾನ್ಸ್‌ನಲ್ಲಿ ಅಡವಿಟ್ಟು ಸಾಲ ಪಡೆದಿದ್ದರೆನ್ನುವುದು ವಿಚಾರಣೆ ವೇಳೆ

## ಮುಂಜಾನೆವರೆಗೂ 8.84 ಲಕ್ಷ ಜನರ ದರ್ಶನ

ಹಾಸನ: ಹಾಸನಾಂಬ ದರ್ಶನಕ್ಕೆ ನಿರೀಕ್ಷೆ ಮೀರಿ ಭಕ್ತರು ಆಗಮಿಸುತ್ತಿದ್ದರೂ ಸುಗಮ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿದೆ. ಬುಧವಾರ ಮುಂಜಾನೆಯವರೆಗೂ ಒಟ್ಟು 8,84,503 ಜನರು ದೇವಿ ದರ್ಶನ ಪಡೆದಿದ್ದಾರೆಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ತಿಳಿಸಿದರು.

ಭಕ್ತರ ಸಂಖ್ಯೆ ದ್ವಿಗುಣವಾಗಿರುವುದರಿಂದ ದರ್ಶನಕ್ಕೆ ಸರಾಸರಿ 3-4 ಗಂಟೆ ತೆಗೆದುಕೊಳ್ಳುತ್ತದೆ. ಸರ್ಕಾರ ಉಚಿತ ಬಸ್ ಸೇವೆ ಒದಗಿಸಿರುವುದರಿಂದ ದೇವಿಯ ದರ್ಶನಕ್ಕೆ ಶೇ.70 ರಷ್ಟು ಮಹಿಳೆಯರೇ ಬರುತ್ತಿದ್ದಾರೆ. ಧರ್ಮದರ್ಶನದಲ್ಲಿ ಆಗಮಿಸುವ ಭಕ್ತರಿಗೆ ಕುಡಿಯುವ ನೀರು, ಮಜ್ಜಿಗೆ, ವಾಟರ್‌ಪ್ರೂಫ್ ಜರ್ಮನ್ ಟೆಂಟ್, 124 ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ. ಸೂಚನೆ ಮೇರೆಗೆ ಸಾಮಾನ್ಯ ಜನರಿಗೆ ದರ್ಶನಕ್ಕೆ ಹೆಚ್ಚಿನ ಅವಕಾಶ ಕಲ್ಪಿಸಲಾಗಿದೆ. ಪಕ್ಷಾತೀತವಾಗಿ ಎಲ್ಲಾ ಜನಪ್ರತಿನಿಧಿಗಳು ಸಹಕಾರ ನೀಡಿದ್ದಾರೆಂದರು.




## ಸಮಯ ಉಳಿಸಲು ಸಿದ್ದೇಶ್ವರಸ್ವಾಮಿ ದರ್ಶನ ಸ್ಥಗಿತ | ಹಾಸನಾಂಬ ದರ್ಶನಕ್ಕೆ ಮಾತ್ರ ಅವಕಾಶ

# ನಿರೀಕ್ಷೆಗೂ ಮೀರಿ ಲಕ್ಷಾಂತರ ಭಕ್ತರ ಆಗಮನ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ದೇವಿ ದರ್ಶನಕ್ಕೆ ನಿರೀಕ್ಷೆಗೂ ಮೀರಿ ರಾಜ್ಯ, ಹೊರ ರಾಜ್ಯಗಳಿಂದ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿರುವುದರಿಂದ, ಸುಗಮ ದರ್ಶನ ವ್ಯವಸ್ಥೆ ಕಲ್ಪಿಸಲು ಜಿಲ್ಲಾಡಳಿತ, ಉಸ್ತುವಾರಿ ಸಚಿವರು ಕಸರತ್ತು ನಡೆಸುತ್ತಿದ್ದಾರೆ.

ಒಂದು ನಿಮಿಷಕ್ಕೆ ಕನಿಷ್ಠ 150ಕ್ಕೂ ಅಧಿಕ ಜನರಿಗೆ ದೇವಿಯ ದರ್ಶನ ಮಾಡಿಕೊಡಬೇಕಾದ ಸವಾಲು ಎದುರಾಗಿದೆ. ಒಂದೊಂದು ನಿಮಿಷವೂ ಮಹತ್ವದ್ದಾಗಿದ್ದು, ಸಮಯ ಉಳಿಸಲು, ನೈವೇದ್ಯ ಹಾಗು ಶ್ರೀ ಸಿದ್ದೇಶ್ವರಸ್ವಾಮಿ ದರ್ಶನವನ್ನು ಸ್ಥಗಿತಗೊಳಿಸಿ ಹಾಸನಾಂಬ ದೇವಿ ದರ್ಶನಕ್ಕೆ ಮಾತ್ರ ಅವಕಾಶ ನೀಡಲಾಗುತ್ತಿದೆ. ಕಳೆದ 24 ಗಂಟೆ ಅವಧಿಯಲ್ಲಿ ಅಂದಾಜು ಎರಡೂವರೆ ಲಕ್ಷ ಭಕ್ತರು ದೇವಿಯ ದರ್ಶನ ಪಡೆದಿದ್ದಾರೆ.

ಭಕ್ತರು ದೇವಾಲಯ ಪ್ರವೇಶ ಮಾಡುತ್ತಿದ್ದಂತೆ ಒಂದು ಸೆಕೆಂಡ್ ಕೂಡ ನಿಂತು ಕೈ ಮುಗಿಯಲು ಅವಕಾಶ ನೀಡದೆ ತಳ್ಳಲಾಗುತ್ತಿದೆ. ಹೆಚ್ಚಿನ ಗಣ್ಯರಿಗೆ ದರ್ಶನಕ್ಕೆ ಅವಕಾಶ ನೀಡದೆ ಬಹುತೇಕ ಸಮಯವನ್ನು ಭಕ್ತರಿಗಾಗಿಯೇ ಮೀಸಲಿಟ್ಟಿರುವುದರಿಂದ ಹೆಚ್ಚಿನ ಸಮಯವಾದರೂ ಭಕ್ತರು ಆಕ್ರೋಶಗೊಳ್ಳದೆ ಸಮಾಧಾನದಿಂದ ದರ್ಶನ ಪಡೆದುಕೊಳ್ಳುತ್ತಿದ್ದಾರೆ.



ಸಾರ್ವಜನಿಕ ದರ್ಶನದ 6ನೇ ದಿನವಾದ ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾರಿಗೆ ಸಚಿವ ರಾಮಲಿಂಗರೆಡ್ಡಿ, ಸಾಹಿತಿ ಬಾನು ಮುಷ್ತಾಕ್, ಚಲನ ಚಿತ್ರನಟರಾದ ಜಯಮಾಲ, ಶೃತಿ, ಮಾಳವಿಕ ಅವಿನಾಶ್, ಶಶಿಕುಮಾರ್ ಅವರು ಜಿಲ್ಲಾಡಳಿತದ ಶಿಷ್ಟಾಚಾರದ ವಾಹನದಲ್ಲಿ ಆಗಮಿಸಿ ದೇವಿ ದರ್ಶನ ಪಡೆದರು.

ದರ್ಶನೋತ್ಸವಕ್ಕೆ ನಾನಾ ಭಾಗಗಳಿಂದ ಅಪಾರ ಸಂಖ್ಯೆಯಲ್ಲಿ ಜನರು ಆಗಮಿಸುತ್ತಿರುವುದರಿಂದ ನಿಯಂತ್ರಿಸುವುದು ಸವಾಲಿನ ಕೆಲಸವಾಗಿದೆ. ಜೊತೆಗೆ ಭಕ್ತರ ಸಹನೆಯ ಕಟ್ಟೆ ಒಡೆಯದಂತೆ ನೋಡಿಕೊಳ್ಳಲು ಸ್ವತಃ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಭಕ್ತರ ನೆರವಿಗೆ ಮುಂದಾಗಿದ್ದಾರೆ.

ಮಂಗಳವಾರ ಇಡೀ ರಾತ್ರಿ ನಿದ್ರೆ ಮಾಡದೆ ದೇವಸ್ಥಾನದ ಬಳಿ ಇದ್ದು, ಲಕ್ಷಾಂತರ ಸಂಖ್ಯೆಯಲ್ಲಿ ಆಗಮಿಸಿದ್ದ ಭಕ್ತರ ದರ್ಶನಕ್ಕೆ ತೊಂದರೆಯಾಗದಂತೆ ನೋಡಿಕೊಂಡರು. ದೂರದ ಊರುಗಳಿಂದ ಆಗಮಿಸಿದ್ದ ಭಕ್ತರನ್ನು ಮಾತನಾಡಿಸಿದ ಸಚಿವರು, ಗೊಂದಲವಿಲ್ಲದೆ ಸಾಗಿ, ತಡವಾದರೂ ಎಲ್ಲರಿಗೂ ದರ್ಶನವಾಗುತ್ತದೆ ಎಂದು ಅಸಮಾಧಾನಕ್ಕೆ ಅವಕಾಶ ನೀಡದೆ ಸಮಾಧಾನ ಪಡಿಸಿದರು.

### ನೈವೇದ್ಯ ಸ್ಥಗಿತ, ದರ್ಶನಕ್ಕೆ ಅವಕಾಶ

ಧರ್ಮ ದರ್ಶನದ ಸಾಲುಗಳು ಮಾತ್ರವಲ್ಲದೇ ಗೋಲ್ಡನ್ ಪಾಸ್, 1000ರೂ., 300ರೂ.ನ ವಿಶೇಷ ದರ್ಶನದ ಸಾಲುಗಳು ಕೂಡ ಜನರಿಂದ ತುಂಬಿ ತುಳುಕುತ್ತಿದ್ದವು.

ಮಂಗಳವಾರ ಮಧ್ಯಾಹ್ನ 3.30 ರಿಂದ ನಿರಂತರ ದರ್ಶನ ನಡೆಯುತ್ತಿದ್ದು, ಭಾರೀ ಸಂಖ್ಯೆಯಲ್ಲಿ ಭಕ್ತರು ದೇವಿ ದರ್ಶನಕ್ಕೆ ಆಗಮಿಸಿದ ಹಿನ್ನಲೆ, ಬುಧವಾರ ಮುಂಜಾನೆ ನೈವೇದ್ಯಕ್ಕಾಗಿ ಗರ್ಭಗುಡಿ ಬಾಗಿಲು ಮುಚ್ಚದೆ ನೈವೇದ್ಯದ ಸಮಯದಲ್ಲೂ ಭಕ್ತರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು.

ಮಧ್ಯರಾತ್ರಿ 12 ಗಂಟೆಗೆ ಮಳೆ ಆರಂಭವಾದರೂ ಮಳೆಯ ನಡುವೆಯೇ ಸಚಿವರು ಛತ್ರಿ ಹಿಡಿದರು ಭಕ್ತರು ಇರುವ ಕಡೆಗಳಲ್ಲಿ ಸಂಚರಿಸಿ ವ್ಯವಸ್ಥೆ ಪರಿಶೀಲಿಸಿ, ಮಳೆಯಿಂದ ಸಮಸ್ಯೆ ಆಗದಂತೆ ನೋಡಿಕೊಂಡರು. ಮುಂಜಾನೆ 3 ಗಂಟೆಗೆ ನಗರದ ಪ್ರವಾಸಿ ಮಂದಿರಕ್ಕೆ ತೆರಳಿ ಕೊಂಚ ವಿಶ್ರಾಂತಿ ಪಡೆದ ಅವರು ಪುನಃ ಬೆಳಿಗ್ಗೆ 8 ಗಂಟೆಗೆ ದೇವಾಲಯಕ್ಕೆ ಆಗಮಿಸಿದರು. ಸಚಿವರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತಾ, ದೇವಸ್ಥಾನದ ಆಡಳಿತಾಧಿಕಾರಿ ಮಾರುತಿ ಅವರು ಸಾಥ್ ನೀಡಿದರು.

# ಉದ್ಯಮಿಗಳೇ ರಸ್ತೆ ಗುಂಡಿ ಮುಚ್ಚುವುದಾದರೆ ಸರ್ಕಾರ ಏಕೆ ಬೇಕು?

## ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ ಹೇಳಿಕೆ ಉಲ್ಲೇಖ | ರಾಜ್ಯ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ತೀವ್ರ ವಾಗ್ದಾಳಿ

• ಪ್ರಜೋದಯ ವರದಿ

**ಬೆಂಗಳೂರು:** ಉದ್ಯಮಿಗಳು, ಕೈಗಾರಿಕೆಗಳು ತಾವೇ ರಸ್ತೆ ಗುಂಡಿ ಮುಚ್ಚಬೇಕು ಎನ್ನುವುದಾದರೆ ಅವರು ತೆರಿಗೆ ಯಾಕೆ ಕಟ್ಟಬೇಕು? ಸರ್ಕಾರ ಯಾಕೆ ಇರಬೇಕು? ಸಚಿವರು ಯಾಕಿರಬೇಕು? ಗ್ರೇಟರ್ ಬೆಂಗಳೂರು ಪ್ರಾಧಿಕಾರ ಯಾಕೆ ಬೇಕು? ಎಂದು ಪ್ರಶ್ನಿಸುವ ಮೂಲಕ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ತೀವ್ರವಾಗಿ ಕಿಡಿಕಾರಿವೆ.

ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ ಅವರು ಬೆಂಗಳೂರಿನ ರಸ್ತೆಗಳು ಮತ್ತು ಕಸದ ಸಮಸ್ಯೆ ಬಗ್ಗೆ ವಿದೇಶಿ ಉದ್ಯಮಿಯೊಬ್ಬರ ಹೇಳಿಕೆಯನ್ನು ಉಲ್ಲೇಖಿಸಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ನಗರದಲ್ಲಿನ ರಸ್ತೆಗಳ ಕಳಪೆ ಸ್ಥಿತಿ ಮತ್ತು ಸಂಚಾರ ಸಮಸ್ಯೆಗಳ ಬಗ್ಗೆ ರಾಜ್ಯ ಸರ್ಕಾರ ಮತ್ತೆ ತೀವ್ರ ಟೀಕೆಗೆ ಗುರಿಯಾಗಿದೆ.



ಈ ನಡುವೆ ಪ್ರತಿಕ್ರಿಯೆ ನೀಡಿರುವ ಉಪ ಮುಖ್ಯಮಂತ್ರಿ ಡಿಕೆ. ಶಿವಕುಮಾರ್ ಅವರು, ಬೆಂಗಳೂರು ಲಕ್ಷಾಂತರ ಜನರಿಗೆ ಅವಕಾಶ, ಗುರುತು ಮತ್ತು ಯಶಸ್ಸನ್ನು ನೀಡಿದೆ. ಈ ನಗರಕ್ಕೆ ನಿರಂತರ ಟೀಕೆಗಳ ಬದಲಾಗಿ ಸಾಮೂಹಿಕ ಪ್ರಯತ್ನದ ಅಗತ್ಯ ಇದೆ ಎಂದು ಹೇಳಿದ್ದರು.

ಈ ಹೇಳಿಕೆ ಇದೀಗ ವಿರೋಧಕ್ಕೆ ಕಾರಣವಾಗಿದೆ. ಸರ್ಕಾರವನ್ನು ಟೀಕಿಸಿರುವ ರಾಜ್ಯ ಬಿಜೆಪಿ, ಉದ್ಯಮಿಗಳು, ಕೈಗಾರಿಕೆಗಳು ತಾವೇ ರಸ್ತೆ ಗುಂಡಿ ಮುಚ್ಚಬೇಕು ಎನ್ನುವುದಾದರೆ ಅವರು ತೆರಿಗೆ ಯಾಕೆ ಕಟ್ಟಬೇಕು? ಸರ್ಕಾರ ಯಾಕೆ ಇರಬೇಕು? ಸಚಿವರು ಯಾಕಿರಬೇಕು? ಯಾಕೆ ಬೇಕು? ಎಂದು ಪ್ರಶ್ನಿಸಿದೆ.

ಬೆಂಗಳೂರಿನ ರಸ್ತೆಗುಂಡಿಗಳ ದುಸ್ಥಿತಿ ಬಗ್ಗೆ ಉದ್ಯಮಿಗಳು, ಸಾರ್ವಜನಿಕರು ದನಿ ಎತ್ತಿದರೆ, ಅವರ ಸಮಸ್ಯೆಗಳಿಗೆ ಸ್ಪಂದಿಸಿ, ವಿಶ್ವಾಸ ತುಂಬುವುದು ಬಿಟ್ಟು ಕಾಂಗ್ರೆಸ್ ಸರ್ಕಾರದ ಸಚಿವರು ಅವರ ಮೇಲೇ ಮುಗಿ ಬೀಳುತ್ತಿದ್ದಾರೆ.

ಬೆಂಗಳೂರಿನ ಉಸ್ತುವಾರಿ ವಹಿಸಿಕೊಂಡಿರುವ ಡಿಸಿಎಂ ಡಿಕೆ. ಶಿವಕುಮಾರ್ ಅವರು ನೋಡಿದರೆ ಇದ್ದರೆ ಇರಿ ಇಲ್ಲವೇ ಹೋಗಿ ಎನ್ನುವ ಬೇಜವಾಬ್ದಾರಿ ಮಾತುಗಳ ಮೂಲಕ ಉದ್ಯಮಿಗಳ, ಜನರ ವಿಶ್ವಾಸ ಕಳೆದುಕೊಂಡಿದ್ದಾರೆ. ಇನ್ನು ಸದಾ ಆರ್ ಎಸ್‌ಎಸ್ ಜಪದಲ್ಲಿ ಬ್ಯುಸಿ ಆಗಿರುವ ಐಟಿ-ಬಿಟಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರಿಗೆ ಅವರ ಖಾತೆ ಯಾವುದು, ಅವರ ಜವಾಬ್ದಾರಿ ಏನು ಎನ್ನುವುದೇ ನನಪಿದ್ದಂತಿಲ್ಲ.

ಆದರೆ ತಮ್ಮಂತಹ ಹಿರಿಯ ಅನುಭವಿ ಸಚಿವರಿಂದ ಈ ರೀತಿಯ ಬೇಜವಾಬ್ದಾರಿ ಮಾತುಗಳನ್ನು ನಾವು ನಿರೀಕ್ಷೆ ಮಾಡಿರಲಿಲ್ಲ. ಉದ್ಯಮಿಗಳು, ಕೈಗಾರಿಕೆಗಳು ತಾವೇ ರಸ್ತೆ ಗುಂಡಿ ಮುಚ್ಚಬೇಕು ಎನ್ನುವುದಾದರೆ ಅವರು ತೆರಿಗೆ ಯಾಕೆ ಕಟ್ಟಬೇಕು? ಸರ್ಕಾರ ಯಾಕೆ ಇರಬೇಕು? ಸಚಿವರು ಯಾಕಿರಬೇಕು? ಯಾಕೆ ಬೇಕು? ಎಂದು ಆಕ್ರೋಶದಿಂದ ಪ್ರಶ್ನಿಸಿದೆ.

ಪ್ರಜಾಪ್ರಭುತ್ವದ ಪಾಲುದಾರರಾದ ಉದ್ಯಮಿಗಳು, ಸಾರ್ವಜನಿಕರು ಟೀಕೆ ಮಾಡುವುದು ಸಹಜ. ಅದು ಮತದಾರರ ಸಂವಿಧಾನದತ್ತ ಹಕ್ಕು. ಅದನ್ನು ಸಕಾರಾತ್ಮಕವಾಗಿ ತೆಗೆದುಕೊಂಡು ಸ್ಪಂದಿಸುವುದು ಬಿಟ್ಟು ಈ ರೀತಿ ಬೇಜವಾಬ್ದಾರಿಯ ಮಾತುಗಳನ್ನು ಆಡಿದರೆ ಕರ್ನಾಟಕದ ಪ್ರಜ್ಞಾವಂತ ಮತದಾರರು ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಶಾಸ್ತಿ ಮಾಡುವುದು ಗ್ಯಾರಂಟಿ ಎಂದು ವಿಪಕ್ಷಗಳ ನಾಯಕರು ಕಾಂಗ್ರೆಸ್‌ಗೆ ಎಚ್ಚರಿಸಿದ್ದಾರೆ.

# ಇಂಡೋನೇಷ್ಯಾದಲ್ಲಿ ನೃತ್ಯ ರೂಪಕ ಪ್ರದರ್ಶನ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಇಂಡೋನೇಷ್ಯಾದ ಬಾಲಿಯಲ್ಲಿ ಇತ್ತೀಚೆಗೆ ನಡೆದ ಅಂತರಾಷ್ಟ್ರೀಯ ಸಾಂಸ್ಕೃತಿಕ ಉತ್ಸವದಲ್ಲಿ ಚನ್ನರಾಯಪಟ್ಟಣದ ಭರತನಾಟ್ಯ ಕಲಾವಿದೆ ವಿದುಷಿ ಪಿ.ಶುಭ್ರತಾರವರ ಕಲಾತಂಡದ ಸಾಧನೆಯನ್ನು ಪರಿಗಣಿಸಿ ಅವರಿಗ ಕಲಾತಿಲಕ ಬಿರುದು ನೀಡಿ ಸನ್ಮಾನಿ ಸಲಾಯಿತು.

ಇಂಡೋನೇಷಿಯಾದ ಬಾಲಿಯಲ್ಲಿ 2025 ನೇ ಸಾಲಿನ ಅಂತರರಾಷ್ಟ್ರೀಯ ಸಾಂಸ್ಕೃತಿಕ ಉತ್ಸವವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ವಿವಿಧ ದೇಶಗಳಿಂದ ಸುಮಾರು 6 ಕಲಾತಂಡಗಳು ಭಾಗವಹಿಸಿದ್ದವು, ಭಾರತ ದೇಶದಿಂದ ಕರ್ನಾಟಕ ರಾಜ್ಯದ ಪರವಾಗಿ ಚನ್ನರಾಯಪಟ್ಟಣದ ಖ್ಯಾತ ಭರತನಾಟ್ಯ ಕಲಾವಿದೆ ವಿದುಷಿ ಪಿ. ಶುಭ್ರತಾ ಅವರ ಕಲಾತಂಡ ಅಂತರರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ನೃತ್ಯ ರೂಪಕವನ್ನು ಪ್ರದರ್ಶಿಸಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದ ಹಿನ್ನೆಲೆಯಲ್ಲಿ ಇಂಡೋನೇಷಿಯಾ ಸರ್ಕಾರದ ವತಿಯಿಂದ 'ಕಲಾ ತಿಲಕ' ಬಿರುದು ನೀಡಿ ನೆನಪಿನ ಕಾಣಿಕೆ ಕೊಡುವ ಮೂಲಕ ಗೌರವಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಭರತನಾಟ್ಯ ಕಲಾವಿದೆ ಪಿ.ಶುಭ್ರತಾ ಮಾತನಾಡಿ, ದೇಶದ ಅತ್ಯುನ್ನತ ಕಲೆಯಾದ ಭರತನಾಟ್ಯವನ್ನು ಇಡೀ ವಿಶ್ವವೇ ಪೂಜ್ಯ ಭಾವನೆಯಲ್ಲಿ ಕಾಣುತ್ತಿದೆ. ಇಂಡೋನೇಷ್ಯಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ನಮ್ಮ ಭರತನಾಟ್ಯ ಕಲೆಯನ್ನು ಮೆಚ್ಚಿ ಇಲ್ಲಿನ ಆಡಳಿತ ವ್ಯವಸ್ಥೆ ತುಂಬು ಹೃದಯದಿಂದ ಅಭಿನಂದಿಸಿ ನಮ್ಮನ್ನು ಸನ್ಮಾನಿಸಿದ್ದಾರೆ. ಅವರ ಅಭಿನಂದನೆಗೆ ನಾವು ತುಂಬಾ ಆಭಾರಿಯಾಗಿದ್ದೇವೆ ಎಂದರು.

ಇಂಡೋನೇಷ್ಯಾದ ಬಾಲಿಯ ಸೆನೆಟರ್ ಡಾ. ಈ ಗುಸ್ತಿ ಆರ್ಯವೇದ ಕರ್ಣ, ಮಹೇಂದ್ರ ದತ್ತ ರಾಜ, ಹಾಗೂ ಕಾರ್ಯಕ್ರಮದ ರೂವಾರಿಗಳಾದ ದೀಪಾ ರಾವ್, ಮಾಧವ್ ಹಾಗೂ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಿದುಷಿ ರೇವತಿ ಕಾಮಂತ್, ಭರತನಾಟ್ಯ ಕಲಾವಿದರಾದ ಸುಶ್ಮಿತಾ ಹಾಗೂ ಬಿಂದುಶ್ರೀ ಉಪಸ್ಥಿತರಿದ್ದರು.

# ನಾಳೆ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮ ಉದ್ಘಾಟನೆ

ಹಾಸನ: ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಅ.17 ರಿಂದ ಅ.20 ರವರೆಗೆ ಸಿಲ್ವರ್ ಜುಬಿಲಿ ಆರ್ಚರ್ಡ್ ಪಾರ್ಕ್‌ನಲ್ಲಿ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಅ.17 ರಂದು ಬೆ.11 ಗಂಟೆಗೆ ಸಿಲ್ವರ್ ಜುಬಿಲಿ ಆರ್ಚರ್ಡ್ ಪಾರ್ಕ್‌ನಲ್ಲಿ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮ ಉದ್ಘಾಟನೆ ಮಾಡಲಾಗುತ್ತದೆ.

ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ಅವರು ಫಲಪುಷ್ಪ ಪ್ರದರ್ಶನ ಉದ್ಘಾಟನೆ ಮಾಡಲಿದ್ದಾರೆ. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್ ಅವರು ಗೌರವ ಉಪಸ್ಥಿತಿವಹಿಸಲಿದ್ದಾರೆ.

ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ ಅವರು ಪುಷ್ಪ ಕಲಾಕೃತಿಗಳ ಉದ್ಘಾಟನೆ ಮಾಡಲಿದ್ದಾರೆ. ಶಾಸಕ ಸ್ವರೂಪ್ ಪ್ರಕಾಶ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ಶ್ರೇಯಸ್ ಎಂ.ಪಟೇಲ್ ಪ್ರದರ್ಶನಾ ಮಳಿಗೆಗಳ ಉದ್ಘಾಟನೆ ಮಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ.ಸಿ.ಎನ್. ಬಾಲಕೃಷ್ಣ, ಎ.ಮಂಜು, ಹೆಚ್.ಕೆ. ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಡಾ|| ಸೂರಜ್ ರೇವಣ್ಣ ಹಾಗೂ ಮಹಾನಗರ ಪಾಲಿಕೆಯ ಮಹಾಪೌರರಾದ ಗಿರೀಶ್ ಚನ್ನವಿರಪ್ಪ ಅವರು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾದ ಕ್ರೀಡಾ ಮತ್ತು ಯುವಜನ ಸಬಲೀಕರಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯ ಕಾರ್ಯದರ್ಶಿಗಳಾದ ಡಾ.ಶಮ್ಲಾ ಇಕ್ಬಾಲ್, ಬೆಂಗಳೂರಿನ ಲಾಲ್‌ಬಾಗ್‌ನ ತೋಟಗಾರಿಕೆ ನಿರ್ದೇಶಕರಾದ ಗಿರೀಶ್. ಆರ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಬೆಂಗಳೂರಿನ ಲಾಲ್‌ಬಾಗ್‌ನ ತೋಟಗಾರಿಕೆ (ಕ್ಷೇತ್ರ ಮತ್ತು ನರ್ಸರಿ) ಅಪರ ನಿರ್ದೇಶಕರಾದ ಕೆ.ಎಂ ಪರಶಿವಮೂರ್ತಿ, ಲಾಲ್‌ಬಾಗ್‌ನ ತೋಟಗಾರಿಕೆ (ಹಣ್ಣುಗಳು) ಅಪರ ನಿರ್ದೇಶಕರಾದ ಪಿ.ಎಂ ಸೊಬರದ, ಲಾಲ್‌ಬಾಗ್‌ನ ತೋಟಗಾರಿಕೆ (ಕಾರ್ಯನಿರ್ವಾಹಕ ನಿರ್ದೇಶಕರು ಸೇರಿದಂತೆ ಇನ್ನಿತರರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಜಿಲ್ಲಾಡಳಿತದ ಶಿಷ್ಟಾಚಾರ ಪಾಲಿಸಿದ ಮುಖ್ಯಮಂತ್ರಿ

## ಸಾರ್ವಜನಿಕರ ಮೆಚ್ಚುಗೆ ಗಳಿಸಿದ ಸಿದ್ದರಾಮಯ್ಯ

• ಪ್ರಜೋದಯ ವರದಿ

**ಹಾಸನ:** ಶಕ್ತಿದೇವತೆ ಹಾಸನಾಂಬ ದರ್ಶನಕ್ಕೆ ಬುಧವಾರ ಬಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಲ್ಲಾಡಳಿತದ ಶಿಷ್ಟಾಚಾರ ಪಾಲಿಸುವ ಮೂಲಕ ಮೆಚ್ಚುಗೆ ಗಳಿಸಿದರು.

ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸುಪ್ರೀಂ ಕೋರ್ಟ್ ಹಾಗು ಹೈಕೋರ್ಟ್ ಮುಖ್ಯ ನ್ಯಾಯಾಧೀಶರು, ಸಭಾಪತಿಗಳಿಗೆ ಶಿಷ್ಟಾಚಾರ ಅನ್ವಯವಾಗುವುದಿಲ್ಲ. ಅವರು ತಮ್ಮ ವಾಹನದಲ್ಲೇ ದೇಗುಲಕ್ಕೆ ಬರಬಹುದೆಂಬ ನಿಯಮವಿದೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಲ್ಲಾಡಳಿತ ನಿಯೋಜಿಸಿದ ವ್ಯಾನ್‌ನಲ್ಲೇ ಬರುವ ಮೂಲಕ ಸರಳತೆ ಮೆರೆದರು. ಬೂವನಹಳ್ಳಿ ಹೆಲಿಪ್ಯಾಡ್‌ನಿಂದ ಕಾರಿನಲ್ಲಿ ಬಂದ ಅವರು ಪ್ರವಾಸಿ ಮಂದಿರದದಿಂದ ವ್ಯಾನ್ ಹತ್ತಿದರು. ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ, ಶಾಸಕ ಕೆ.ಎಂ. ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್ ಹಾಗು ಪಕ್ಷದ ಮುಖಂಡರೊಂದಿಗೆ ಬಂದರು. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಹಾಗು ಅಧಿಕಾರಿಗಳು ಮುಖ್ಯಮಂತ್ರಿಯವರನ್ನು ಆತ್ಮೀಯವಾಗಿ ಸ್ವಾಗತಿಸಿದರು.

ಜನರತ್ತ ಕೈ ಬೀಸುತ್ತಾ ದೇವಾಲಯ ಪ್ರವೇಶಿಸಿದ ಮುಖ್ಯಮಂತ್ರಿ ಅವರನ್ನು ಕಂಡು ಸಾರ್ವಜನಿಕರು ಪುಳುಕಿತರಾದರು. ಸಿದ್ದರಾಮಯ್ಯ ಅವರ ಪರ ಘೋಷಣೆಗಳು ಮೊಳಗಿದವು.

**ಅಗಿಲೆ ಯೋಗೀಶ್ ವಶಕ್ಕೆ:**

ಹಾಸನಾಂಬ ದರ್ಶನಕ್ಕೆ ಸ್ಥಳೀಯರಿಗೆ ಆದ್ಯತೆ ನೀಡಬೇಕು, ಇಲ್ಲವಾದರೆ ಮುಖ್ಯಮಂತ್ರಿಗೆ ಕಪ್ಪು ಬಾವುಟ ಪ್ರದರ್ಶಿಸಲಾಗುವುದೆಂದು ಎಚ್ಚರಿಕೆ ನೀಡಿದ್ದ ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೀಶ್ ಅವರನ್ನು ಪೊಲೀಸರು ಬುಧವಾರ ಬೆಳಿಗ್ಗೆಯೇ ವಶಕ್ಕೆ ಪಡೆದರು.



ಉದಯಗಿರಿಯಲ್ಲಿರುವ ಅವರ ನಿವಾಸಕ್ಕೆ ತೆರಳಿದ್ದ ನಗರ ಠಾಣೆ ಪೊಲೀಸರು, ಮುಖ್ಯಮಂತ್ರಿ ಆಗಮನದ ವೇಳೆ ಪ್ರತಿಭಟನೆ ಮಾಡಬಾರದೆಂದು ಮನವಿ ಮಾಡಿದರು.

ಆದರೆ ಅದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಯೋಗೀಶ್, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಭಟನೆ ಹತ್ತಿಕ್ಕುವುದು ಸರಿಯಲ್ಲ, ನಾನು ಯಾರ ವಿರುದ್ಧವೂ ದ್ವೇಷ ಸಾಧಿಸುತ್ತಿಲ್ಲ. ಸ್ಥಳೀಯರಿಗೆ ದರ್ಶನಾವಕಾಶ ಸಿಗಬೇಕೆನ್ನುವುದಷ್ಟೇ ಬೇಡಿಕೆ ಎಂದರು.

ಆದ್ದರಿಂದ ಪೊಲೀಸರು ಅಗಿಲೆ ಯೋಗೇಶ್ ಅವರನ್ನು ವಶಕ್ಕೆ ಪಡೆದು ಮಧ್ಯಾಹ್ನದ ಬಳಿಕ ಬಿಡುಗಡೆ ಮಾಡಿದರು.

# ಜೀರ್ಣೋದ್ಧಾರಗೊಂಡ ದೇವಾಲಯಗಳ ಲೋಕಾರ್ಪಣೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ದಮ್ಮನಿಂಗಲ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಶಿಲಾಮಯ ಅಮೃತಲಿಂಗೇಶ್ವರ ಸ್ವಾಮಿ ಮತ್ತು ಕಾಲ ಭೈರವೇಶ್ವರರ ಪುನರ್ ಜೀರ್ಣೋದ್ಧಾರಗೊಂಡ ದೇವಾಲಯಗಳ ಲೋಕಾರ್ಪಣೆ, ದೇವರ ಮೂರ್ತಿ ಪ್ರತಿಷ್ಠಾಪನೆಯನ್ನು ಸಕಲ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಜರುಗಿತು.

ಮೂರು ದಿನಗಳ ಕಾಲ ಜರುಗಿದ ಧಾರ್ಮಿಕ ಮಹೋತ್ಸವದಲ್ಲಿ ಗಂಗೆ ಪೂಜೆಯೊಂದಿಗೆ ಕಳಸ ಹೊತ್ತ ಮಹಿಳೆಯರು, ವಿವಿಧ ಮಂಗಲ ವಾದ್ಯಗಳೊಂದಿಗೆ ಗ್ರಾಮ ದೇವತೆಗಳಾದ ವೀರಭದ್ರೇಶ್ವರ, ಲಕ್ಷ್ಮೀದೇವಿ, ಹೊಂಗೇಲಕ್ಷ್ಮಿ, ದೊಡ್ಡ ತರಳಮ್ಮ ಕನ್ನಂಬಾಡಿಯಮ್ಮ, ಹರಿಯಾಲದಮ್ಮ ಹೊನ್ನಾಂಬಿಕೆ, ದೇವರನ್ನು ಆಹ್ವಾನಿಸಿ ಪ್ರತಿಷ್ಠಾಪಿಸಲಾಯಿತು.



ಮುಂಜಾನೆ ಬ್ರಾಹ್ಮ ಮುಹೂರ್ತದಲ್ಲಿ ಪುನರ್ ಪ್ರಾಣ ಪ್ರತಿಷ್ಠಾಪನೆಯ ಧಾರ್ಮಿಕ ವಿಧಿ ನೆರವೇರಿಸಿ, ಪೂರ್ಣಾಹುತಿಯೊಂದಿಗೆ ಮಹಾಮಂಗಳಾರತಿ ಮಾಡಲಾಯಿತು.

ಶಾಸಕ ಸಿ.ಎನ್.ಬಾಲಕೃಷ್ಣ ಮಾತನಾಡಿ, ದೇವಾಲಯ ನಿರ್ಮಾಣಕ್ಕೆ ಅರ್ಧ ಎಕರೆ ಸ್ಥಳವನ್ನು ನೀಡಿರುವ ಗಂಗಾಧರ್ ಕುಟುಂಬದವರನ್ನು ಪ್ರಶಂಸಿಸಿದರು. ದೇವಾಲಯದ ಒಳ ಭಾಗದಲ್ಲಿ ಕಾಂಕ್ರೀಟ್ ಹಾಕಿಸಿ, 10 ಲಕ್ಷ ಅನುದಾನದಲ್ಲಿ ಸಭಾಂಗಣ ನಿರ್ಮಿಸಲಾಗುವುದು ಎಂದರು. ಇದೇ ಸಂದರ್ಭದಲ್ಲಿ ದಾನಿಗಳನ್ನು ಸನ್ಮಾನಿಸಲಾಯಿತು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಡಿ.ಜೆ. ರಾಮಕೃಷ್ಣ ಮತ್ತು ದೇವಾಲಯದ ಉಸ್ತುವಾರಿ ದೇವರಾಜು ಮಾತನಾಡಿ, ದಾನಿಗಳನ್ನು ಸ್ಮರಿಸಿ ಅಭಿನಂದಿಸಿದರು.

ವಿಧಾನಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಬಿಜೆಪಿ ಮುಖಂಡ ಚಿದಾನಂದ್, ಮುಖಂಡರಾದ ದೇವರಾಜೇಗೌಡ, ಕೃಷ್ಣೇಗೌಡ, ಎ.ಆರ್.ಶಿವರಾಜ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಚಿಕ್ಕಬಿಳ್ತಿ ಪ್ರವೀಣ್, ಬಿಜೆಪಿ ಮುಖಂಡ ರವಿ ದಮ್ಮನಿಂಗಲ, ಬಸವಣ್ಣ, ಶ್ರೀನಿವಾಸ, ಶೇಖರ್, ಅನಂತ್, ರುದ್ರೇಶಣ್ಣ, ಅಪ್ಪಣರ ರುದ್ರಣ್ಣ, ಈರಣ್ಣ, ಮನು, ವಾಸು, ಸಂದೀಪ್, ರಾಘವೇಂದ್ರ, ರಮೇಶ್, ನಂಜೇಗೌಡ, ಸೋಮಶೇಖರ, ರಂಗೇಗೌಡ, ಪುಟ್ಟೇಗೌಡ, ಮಂಜಣ್ಣ, ರಾಜೇಶ್ ಇನ್ನಿತರರು ಪಾಲ್ಗೊಂಡಿದ್ದರು.

# ಅರಸೀಕೆರೆಯಲ್ಲಿ ದೇಶಾಭಿಮಾನದ ಝೇಂಕಾರ

• ಪ್ರಜೋದಯ ವರದಿ

**ಅರಸೀಕೆರೆ:** ಭಾರತ್ ಮಾತಾ ಕೀ ಜಯ್ ಎಂಬ ಘೋಷ ವಾಕ್ಯದೊಂದಿಗೆ ನಗರದಲ್ಲಿ ದೇಶಾಭಿಮಾನ ಝೇಂಕರಿಸಿತು. ರಾಷ್ಟ್ರೀಯ ಸ್ವಯಂ ಸೇವಾ ಸಂಘದ ವತಿಯಿಂದ ನಗರದಲ್ಲಿ ಆಯೋಜಿ ಸಿದ್ದ ಶತಾಬ್ದಿ ಪಥ ಸಂಚಲದಲ್ಲಿ ಗಣವೇಶದೊಂದಿಗೆ ನೂರಾರು ಸ್ವಯಂಸೇವಕರು ಪಾಲ್ಗೊಳ್ಳುವ ಮೂಲಕ ಗಮನ ಸೆಳೆದರು.

ನಿಗದಿತ ಸಮಯ ಮಧ್ಯಾಹ್ನ 3:30ಕ್ಕೆ ಗ್ರಾಮ ದೇವತೆ ಕರಿಯಮ್ಮ ದೇವಾಲಯದ ಆವರಣದಲ್ಲಿ ಸೇರಿದ ಏಳು ನೂರಕ್ಕೂ ಹೆಚ್ಚು ಗಣವೇಶ ದಾರಿಗಳು ತೆರೆದ ಜೀಪಿನಲ್ಲಿ ರಾಷ್ಟ್ರೀಯ ಸ್ವಯಂ ಸೇವಾ ಸಂಘದ ಸಂಸ್ಥಾಪಕರಾದ ಕೇಶವ್ ಬಲಿರಾಮ್ ಹೆಡ್ಗೆವಾರ್ ಮತ್ತು ಎಂ.ಎಸ್. ಗೋಲ್ವಾಲ್ಕರ್ (ಗುರೂಜಿ) ಅವರ ಭಾವಚಿತ್ರವನ್ನು ಇಟ್ಟು ಪಥಸಂಚಲನ ಆರಂಭಿಸಿದ ಸ್ವಯಂಸೇವಕರಿಗೆ ರಸ್ತೆ ಉದ್ದಕ್ಕೂ ನೀರು ಹಾಕಿ ರಂಗೋಲಿ ಬಿಡಿಸಿ ಪುಷ್ಪಾರ್ಚನೆ ಮಾಡುವ ಮೂಲಕ ನಗರದ ಜನತೆ ಸ್ವಾಗತ ಕೋರಿದ್ದು ವಿಶೇಷವಾಗಿತ್ತು.



ಇನ್ನೂ ಗಣವೇಶ ಇಲ್ಲದೆಯೂ ನೂರಾರು ಮಂದಿ ಪಥ ಸಂಚಲನೆಯಲ್ಲಿ ಪಾಲ್ಗೊಳ್ಳುವ ಮೂಲಕ ದೇಶಾಭಿಮಾನ ಮೆರೆದರೆ, ಶಿಸ್ತುಬದ್ಧವಾಗಿ ಸಾಗುವ ಗಣವೇಶ ದಾರಿಗಳನ್ನು ನೋಡಲು ರಸ್ತೆಯ ಎರಡು ಬದಿ ನಿಂತಿದ್ದ ಜನ ಪುಷ್ಪವೃಷ್ಟಿ ಮಾಡುವ ಮೂಲಕ ಚಪ್ಪಾಳೆ ತಟ್ಟಿ ಪಥಸಂಚನೆಯನ್ನು ಸ್ವಾಗತಿಸುವ ಮೂಲಕ ಬರಮಾಡಿಕೊಳ್ಳುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.

ನಗರದ ಪಿಪಿ ವೃತದಲ್ಲಿ ಮಹನೀಯರ ವೇಷ ಭೂಷಣದೊಂದಿಗೆ ಕಾಣಿಸಿಕೊಂಡ ಮಕ್ಕಳು ಶತಾಬ್ದಿ ಪಥ ಸಂಚಲನದ ರಂಗನ್ನು ಮತ್ತಷ್ಟು ಹೆಚ್ಚುವಂತೆ ಮಾಡಿದರು.

ಪಥ ಸಂಚಲನೆಯು ಸಾಗುವ ಮಾರ್ಗದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆ ಸಂಭವಿಸಿದ ರೀತಿ ಪೊಲೀಸರು ಬಿಗಿ ಬಂದೋಬಸ್ತ್ ವ್ಯವಸ್ಥೆ ಕೈಗೊಂಡಿದ್ದರು.

# ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್

• ಪ್ರಜೋದಯ ವರದಿ

**ಹಾಸನ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ) ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್‌ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.

ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಸ್ಕೃತಿ ಪರಿಚಯ ಪರೀಕ್ಷೆ




**ಚನ್ನರಾಯಪಟ್ಟಣ:** ಭಾರತ ಸಂಸ್ಕೃತಿ ಪ್ರತಿಷ್ಠಾನದ ಕರ್ನಾಟಕ ಪ್ರಾಂತದ ವತಿಯಿಂದ ಜರುಗುವ ಭಾರತ ಸಂಸ್ಕೃತಿ ಪರಿಚಯ ಪರೀಕ್ಷೆಗಳಾದ ಎಳೆಯರ ರಾಮಾಯಣ ಮತ್ತು ಕಿಶೋರ ಭಾರತ ಪರೀಕ್ಷೆಯಲ್ಲಿ ತಾಲ್ಲೂಕಿನಾದ್ಯಂತ ಎಲ್ಲಾ ಪ್ರೌಢಶಾಲೆಗಳಿಂದ 2 ಸಾವಿರ ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದಾರೆ. ನ.15 ರಂದು ಆಯಾ ಶಾಲೆಗಳಲ್ಲಿ ಪರೀಕ್ಷೆಗಳು ನಡೆಯಲಿವೆ ಎಂದು ತಾಲೂಕು ಪರೀಕ್ಷಾ ಸಂಯೋಜಕ ಡಿ.ಗೋಪಾಲರಾವ್ ಬೆಕ್ಕ ತಿಳಿಸಿದ್ದಾರೆ.

# ಅಂತಾರಾಷ್ಟ್ರೀಯ ಕ್ರಿಕೆಟ್: ಇಂಗ್ಲೆಂಡ್ ಹಿಂದಿಕ್ಕಿದ ಭಾರತ

• ಪ್ರಜೋದಯ ವರದಿ

**ನವದೆಹಲಿ:** ವೆಸ್ಟ್ ಇಂಡೀಸ್ ವಿರುದ್ಧದ ಟೆಸ್ಟ್ ಸರಣಿಯ ಅಂತಿಮ ಪಂದ್ಯದಲ್ಲೂ ಜಯ ಸಾಧಿಸಿರುವ ಟೀಂ ಇಂಡಿಯಾ, ಅಂತಾರಾಷ್ಟ್ರೀಯ ಕ್ರಿಕೆಟ್‌ನ ಮೂರೂ ಮಾದರಿಗಳಲ್ಲಿ ಹೆಚ್ಚು ಗೆಲುವುಗಳನ್ನು ಕಂಡ ತಂಡಗಳ ಸಾಲಿನಲ್ಲಿ ಎರಡನೇ ಸ್ಥಾನಕ್ಕೇರಿದೆ.

ನವದೆಹಲಿಯಲ್ಲಿ ಶುಕ್ರವಾರ (ಅ.10ರಂದು) ಆರಂಭವಾದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ್ದ ವಿಂಡೀಸ್, ಪ್ರಥಮ ಇನಿಂಗ್ಸ್‌ನಲ್ಲಿ 248 ರನ್‌ಗಳಿಗೆ ಆಲೌಟ್ ಆಗಿತ್ತು. ಇದಕ್ಕುತ್ತರವಾಗಿ 5 ವಿಕೆಟ್‌ಗೆ 518 ರನ್ ಗಳಿಸಿದ ಶುಭಮನ್ ಗಿಲ್ ಬಳಗ, ಪ್ರವಾಸಿ ಪಡೆಯ ಮೇಲೆ ಫಾಲೋಆನ್ ಹೇರಿತು. ಆದರೆ, ಸೋಲು ತಪ್ಪಿಸಿಕೊಳ್ಳಲು ಎರಡನೇ ಇನಿಂಗ್ಸ್‌ನಲ್ಲಿ ಹೋರಾಟ ನಡೆಸಿತು.




ಆದಾಗ್ಯೂ 390 ರನ್ ಗಳಿಸಿ ಆಲೌಟ್ ಆಗುವ ಮೂಲಕ ಪಂದ್ಯವನ್ನು ಐದನೇ ದಿನದವರೆಗೂ ವಿಸ್ತರಿಸಿತು.

124 ರನ್‌ಗಳ ಅಲ್ಪ ಗುರಿಯನ್ನು ಭಾರತ 3 ವಿಕೆಟ್ ಕಳೆದುಕೊಂಡು ತಲುಪಿತು. ಇದರೊಂದಿಗೆ, ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ 922ನೇ ಜಯ ದಾಖಲಿಸಿತು. ಅಗ್ರ ಸ್ಥಾನದಲ್ಲಿ ಆಸ್ಟ್ರೇಲಿಯಾ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಹೆಚ್ಚು ಜಯ ಸಾಧಿಸಿದ ತಂಡಗಳ ಪಟ್ಟಿಯಲ್ಲಿ ಆಸ್ಟ್ರೇಲಿಯಾ ಅಗ್ರ ಸ್ಥಾನದಲ್ಲಿದೆ. ಟೆಸ್ಟ್, ಏಕದಿನ ಹಾಗೂ ಟಿ 20 ಮಾದರಿಯಲ್ಲಿ ಒಟ್ಟು 2,107 ಪಂದ್ಯಗಳಲ್ಲಿ ಆಡಿರುವ ಈ ತಂಡ 1,158 ಜಯ ಮತ್ತು 676 ಸೋಲು ಕಂಡಿದೆ. 14 ಟೈ, 219 ಡ್ರಾ ಸಾಧಿಸಿದ್ದು, ಫಲಿತಾಂಶ ಕಾಣದ 40 ಪಂದ್ಯಗಳಿಗೂ ಸಾಕ್ಷಿಯಾಗಿದೆ.

ಎರಡನೇ ಸ್ಥಾನದಲ್ಲಿರುವ ಭಾರತ 1,916 ಪಂದ್ಯಗಳಿಂದ 922 ಜಯ ಸಾಧಿಸಿದ್ದು, 702 ಪಂದ್ಯಗಳಲ್ಲಿ ಸೋಲು ಅನುಭವಿಸಿದೆ. 18 ಟೈ, 224 ಡ್ರಾ ಮಾಡಿಕೊಂಡಿದೆ. 50 ಪಂದ್ಯಗಳಲ್ಲಿ ಫಲಿತಾಂಶ ಬಂದಿಲ್ಲ.

2,117 ಪಂದ್ಯಗಳಲ್ಲಿ ಆಡಿ 921 ಗೆದ್ದಿರುವ ಇಂಗ್ಲೆಂಡ್ 790 ರಲ್ಲಿ ಸೋಲುಂಡಿದೆ. 11 ಟೈ, 356 ಡ್ರಾ ಹಾಗೂ 39 ಪಂದ್ಯಗಳು ಫಲಿತಾಂಶವಿಲ್ಲದೆ ರದ್ದಾಗಿವೆ. ಪಾಕಿಸ್ತಾನ (1,734 ಪಂದ್ಯ, 831 ಜಯ), ದಕ್ಷಿಣ ಆಫ್ರಿಕಾ (1,374 ಪಂದ್ಯ, 719 ಜಯ), ವೆಸ್ಟ್ ಇಂಡೀಸ್ (1,711 ಪಂದ್ಯ, 710 ಜಯ), ಶ್ರೀಲಂಕಾ (1,479 ಪಂದ್ಯ, 637 ಜಯ), ನ್ಯೂಜಿಲೆಂಡ್ (1,559 ಪಂದ್ಯ, 634 ಜಯ) ಕ್ರಮವಾಗಿ ನಂತರದ ಸ್ಥಾನಗಳಲ್ಲಿವೆ.

# ನ.28 ರಿಂದ ಕೃಷಿ ಮೇಳ

**ಹಾಸನ:** ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ತನ್ನ ಮೊಟ್ಟಮೊದಲ ಕೃಷಿಮೇಳ-2025ನ್ನು ಕರ್ನಾಟಕ ಸರ್ಕಾರದ ವಿವಿಧ ಅಭಿವೃದ್ಧಿ ಇಲಾಖೆಗಳು, ಹಣಕಾಸು ಸಂಸ್ಥೆಗಳು, ಪರಿಕರ ಮಾರಾಟಗಾರರು, ಸ್ವಯಂ ಸೇವಾ ಸಂಸ್ಥೆಗಳು, ಉದ್ದಿಮೆದಾರರು, ರೈತ ಉತ್ಪಾದಕರ ಕಂಪನಿಗಳು, ಇನ್ನಿತರೆ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಮೇಳ-2025 ಅನ್ನು ಸಮಗ್ರ ಕೃಷಿಯಿಂದ ಸುಸ್ಥಿರತೆ ಎಂಬ ಘೋಷವಾಕ್ಯದೊಂದಿಗೆ, ನ. 28 ರಿಂದ ನ.30 ರವರೆಗೆ ಮಂಡ್ಯದ ವಿ.ಸಿ.ಫಾರಂ ಆವರಣದಲ್ಲಿ ಆಯೋಜಿಸಲಾಗಿದೆ.

ಗ್ರಾಮೀಣ ಅಭಿವೃದ್ಧಿಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು, ನಾಗರೀಕರು, ವಿದ್ಯಾರ್ಥಿಗಳು ಅಧಿಕ ಸಂಖ್ಯೆಯಲ್ಲಿ ಆಗಮಿಸಿ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದ್ದಾರೆ.

## ಡೈನಾಮಿಕ್ ಸ್ಫೋಟದಿಂದ ಹಲವು ಮನೆಗಳಲ್ಲಿ ಬಿರುಕು | ಕ್ರಮ ಕೈಗೊಳ್ಳದಿದ್ದರೆ ಪ್ರತಿಭಟನೆ ಎಚ್ಚರಿಕೆ

# ಜನವಸತಿ ಪ್ರದೇಶದಲ್ಲಿ ಕಲ್ಲು ಗಣಿಗಾರಿಕೆ ಸ್ಥಗಿತಕ್ಕೆ ಒತ್ತಾಯ

• ಪ್ರಜೋದಯ ವರದಿ

**ಆಲೂರು:** ಜನವಸತಿ ಪ್ರದೇಶದಲ್ಲಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವುದನ್ನು ಕೂಡಲೆ ನಿಲ್ಲಿಸುವಂತೆ ಅರಣ್ಯ ಹಾಗೂ ಕಂದಾಯ ಸಚಿವರನ್ನು ಭೇಟಿ ಮಾಡಿ ಒತ್ತಾಯಿಸಲಾಗುವುದು ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ತಿಳಿಸಿದರು.

ತಾಲ್ಲೂಕಿನ ಕೆ. ಹೊಸಕೋಟೆ ಹೋಬಳಿ ಹೊಸಮತ ಗ್ರಾಮದಲ್ಲಿರುವ ಶಿಲುಬೆಬೆಟ್ಟದಲ್ಲಿ, ಅಕ್ರಮ ಕಲ್ಲುಗಣಿಗಾರಿಕೆ ನಡೆಸುತ್ತಿರುವುದನ್ನು ವಿರೋಧಿಸಿ ಅಕ್ಕಪಕ್ಕದ ಗ್ರಾಮಸ್ಥರು ಕಳೆದ ಹಲವು ತಿಂಗಳುಗಳಿಂದ ಪ್ರತಿಭಟನೆ ನಡೆಸುತ್ತಿರುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಕಾಡಾನೆಗಳು ವಾಸಿಸುತ್ತಿರುವ ಅತ್ಯಂತ ಸೂಕ್ಷ್ಮ ಪ್ರದೇಶದಲ್ಲಿ ಡೈನಮೆಂಟ್ ಬಳಸಿ ಕಲ್ಲುಗಣಿ ಗಾರಿಕೆ ಮಾಡಲು ಅಧಿಕಾರಿಗಳು ಅವಕಾಶ ನೀಡಿದ್ದಾರೆ.



ಈ ಕಲ್ಲು ಕ್ವಾರಿ ಪಕ್ಕದಲ್ಲಿ ಜನರು ವಾಸಿಸುತ್ತಿರುವ ಹಲವು ಮನೆಗಳು ಡೈನಾಮೆಂಟ್ ಸ್ಫೋಟದಿಂದಾಗಿ ಬಿರುಕು ಬಿಟ್ಟಿವೆ. ಈ ಸಂಬಂಧವಾಗಿ ಗ್ರಾಮಸ್ಥರು ಹಲವಾರು ಮನವಿ ಸಲ್ಲಿಸಿದ್ದರು ಯಾವುದೇ ಪ್ರಯೋಜನವಾಗದ ಕಾರಣ ಪ್ರತಿಭಟನೆಯ ಹಾದಿ ಹಿಡಿದಿದ್ದಾರೆ.

ಇಷ್ಟೆಲ್ಲ ಆದರೂ ಸಂಬಂಧಪಟ್ಟ ಅಧಿಕಾರಿಗಳಾಗಲಿ ಪೊಲೀಸರಾಗಲಿ ಯಾವುದೇ ಕ್ರಮ ಕೈಗೊಂಡಿಲ್ಲ. ಇಲ್ಲಿರುವವರೆಲ್ಲರೂ ರೈತಾಪಿ ವರ್ಗದವರಾಗಿದ್ದು ಈಗಾಗಲೇ ಕಾಡಾನೆ ಸಮಸ್ಯೆಗೆ ಸಿಲುಕಿ ನಲುಗಿ ಹೋಗಿದ್ದಾರೆ. ಈಗ ಇವರ ಜಮೀನಿನಲ್ಲಿ ಗಣಿಗಾರಿಕೆಯ ಪರಿಣಾಮ ಧೂಳು ಹಾಗೂ ತ್ಯಾಜ್ಯ ತುಂಬಿಕೊಂಡು ಬೆಳೆ ಬೆಳೆಯಲಾಗದೆ ಜಮೀನನ್ನು ಬೀಳು ಬಿಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ರೈತ ಸಂಘಟನೆ ರೈತರ ಹಿತ ಕಾಯಲು ಸದಾ ಸನ್ನದ್ಧರಾಗಿದ್ದು ಯಾವುದೇ ಕಾರಣಕ್ಕೂ ಅವರಿಗೆ ತೊಂದರೆ ಆಗಲು ಬಿಡುವುದಿಲ್ಲ ಎಂದು ತಿಳಿಸಿದರು.

ಹಾಗೆಂದು ಇಲ್ಲಿ ಗಣಿಗಾರಿಕೆ ನಡೆಸುತ್ತಿರುವ ಮಾಲೀಕರನ್ನಾಗಲೀ, ಕೆಲಸಗಾರರನ್ನಾಗಲೀ ತೊಂದರೆಗೆ ಸಿಲುಕಿಸಬೇಕು ಎಂಬುದು ನಮ್ಮ ಉದ್ದೇಶವಲ್ಲ. ಗ್ರಾಮಸ್ಥರು ಹಾಗೂ ಕಾಡುಪ್ರಾಣಿಗಳಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಪರ್ಯಾಯ ಜಾಗದಲ್ಲಿ ಗಣಿಗಾರಿಕೆ ನಡೆಸಿದರೆ ನಮ್ಮದೇನೂ ತಕರಾರಿಲ್ಲ. ಆದರೆ ಇಲ್ಲಿ ಪುನಹ ಗಣಿಗಾರಿಕೆಗೆ ಅವಕಾಶ ನೀಡಬಾರದು ಎಂದು ಎಚ್ಚರಿಕೆ ನೀಡುತ್ತಿದ್ದೇವೆ. ಕೂಡಲೆ ಸಮಸ್ಯೆಗೆ ಪರಿಹಾರ ಕಲ್ಪಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು, ಇಲ್ಲಿಯ ಗಣಿಗಾರಿಕೆಯನ್ನು ನಿಲ್ಲಿಸಬೇಕೆಂದು ಒತ್ತಾಯಿಸಿ ಹಲವು ಬಾರಿ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ರಾಜ್ಯಾಧ್ಯಕ್ಷರು ಇಂದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ಪರಿಸ್ಥಿತಿಯನ್ನು ಅವಲೋಕಿಸಿದ್ದಾರೆ. ಶೀಘ್ರ ಸಂಬಂಧಪಟ್ಟ ಸಚಿವರನ್ನು ಭೇಟಿ ಮಾಡಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಸೂಚಿಸುವುದಾಗಿ ತಿಳಿಸಿದ್ದಾರೆ. ಸಚಿವರು ಏನು ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಕಾದು ನೋಡಿ ಮುಂದಿನ ಹೋರಾಟದ ಬಗ್ಗೆ ಚರ್ಚೆ ಮಾಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ರೈತ ಸಂಘದ ರಾಜ್ಯ ಸಂಚಾಲಕ ಮಹಮ್ಮದ್ ಸಾಧಿಕ್, ಕರವೇ ಜಿಲ್ಲಾ ಉಪಾಧ್ಯಕ್ಷ ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ಅರುಣ ಭಾಸ್ಕರ್, ಆಲೂರು ತಾಲ್ಲೂಕು ಕರವೇ ಅಧ್ಯಕ್ಷ ರಾಘವೇಂದ್ರ, ಸಕಲೇಶಪುರ ತಾಲೂಕ್ ಅಧ್ಯಕ್ಷ ರಮೇಶ್ ಪೂಜಾರಿ, ದುದ್ದ ರೇವಣ್ಣ, ಸತೀಶ್ ದುದ್ದ, ಮಂಜೇಗೌಡ, ಸಂಜು ಹಾಗೂ ಇತರ ಗ್ರಾಮಸ್ಥರು ಉಪಸ್ಥಿತರಿದ್ದರು.

# ಎಸ್ಸೆಸ್ಸೆಲ್ಸಿ: ಶೇ.33 ಅಂಕ ಪಡೆದರೆ ಉತ್ತೀರ್ಣ

## ಸರ್ಕಾರಿ-ಖಾಸಗಿ ಶಾಲೆಗಳಿಗೂ ಈ ವರ್ಷದಿಂದಲೇ ಅನ್ವಯ

• ಪ್ರಜೋದಯ ವರದಿ

**ಬೆಂಗಳೂರು:** ಇನ್ನು ಮುಂದೆ ಎಸ್.ಎಸ್.ಎಲ್.ಸಿ. ಯಲ್ಲಿ ಶೇ. 33 ಅಂಕ ಪಡೆದರೆ ಉತ್ತೀರ್ಣ ಎಂದು ಘೋಷಿಸಲಾಗುವುದು. ಈ ವರ್ಷದಿಂದಲೇ ಖಾಸಗಿ ಶಾಲೆಗಳಿಗೂ ಇದು ಅನ್ವಯ ಆಗಲಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರಸಕ್ತ ವರ್ಷದಿಂದ ಶೇ. 33 ಅಂಕ ಪಡೆದರೆ ಉತ್ತೀರ್ಣ ಎಂದು ಘೋಷಿಸಲಾಗುವುದು. 625ಕ್ಕೆ 206 ಅಂಕ ಪಡೆದರೆ ವಿದ್ಯಾರ್ಥಿಗಳು ಉತ್ತೀರ್ಣ ಆಗಲಿದ್ದಾರೆ.

ಆಂತರಿಕ ಅಂಕ, ಬಾಹ್ಯ ಅಂಕ ಎರಡು ಸೇರಿ ಶೇ. 33 ಪಡೆಯಬೇಕಾಗುತ್ತದೆ ಎಂದು ಸಚಿವರು ಮಾಹಿತಿ ನೀಡಿದರು. ಪರೀಕ್ಷಾ ವ್ಯವಸ್ಥೆ ಸುಧಾರಣೆಗೆ 3 ಪರೀಕ್ಷೆ ವ್ಯವಸ್ಥೆ ಜಾರಿ ಮಾಡಿದ್ದೇವೆ. ಪಾರದರ್ಶಕವಾಗಿ ಇರಲಿ ಅಂತ ವೆಬ್ ಕ್ಯಾಸ್ಟ್ ಮಾಡಿದ್ದೆವು. ಪರೀಕ್ಷೆಗಳು ಉತ್ತಮವಾಗಿ ನಡೆದವು.

ವೆಬ್ ಕ್ಯಾಸ್ಟಿಂಗ್‌ನಿಂದ ಕಡಿಮೆ ಅಂಕ ಬಂದಾಗ ಶಿಕ್ಷಕರು ಜವಾಬ್ದಾರಿ ತಗೊಂಡು ಕೆಲಸ ಮಾಡಿದರು. ವಿಶೇಷ ತರಗತಿ ಪಡೆದು ವಿದ್ಯಾರ್ಥಿಗಳನ್ನು ತಯಾರು ಮಾಡಿದರು.



ಆದ್ದರಿಂದ ಉತ್ತಮ ಫಲಿತಾಂಶ ಬಂದಿದೆ ಎಂದು ವಿವರಿಸಿದರು. ಇದೀಗ ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ ತರಲು ಶೇ. 33 ರಷ್ಟು ಉತ್ತೀರ್ಣದ ಅಂಕ ನಿಗದಿ ಮಾಡಲಾಗಿದೆ. 625ಕ್ಕೆ 206 ಅಂಕ ಪಡೆದರೆ ಅಥವಾ ಆಯಾ ವಿಷಯದ ಒಟ್ಟು ಅಂಕಗಳಲ್ಲಿ 30 ಅಂಕ ಪಡೆದಿರಬೇಕು. ಆಂತರಿಕ ಮತ್ತು ಬಾಹ್ಯ ಅಂಕ ಸೇರಿ ಒಟ್ಟು ಶೇ. 33 ರಷ್ಟು ಅಂಕ ಪಡೆದ ವಿದ್ಯಾರ್ಥಿಯನ್ನು ಉತ್ತೀರ್ಣ ಎಂದು ಘೋಷಿಸಲಾಗುತ್ತದೆ ತಿಳಿಸಿದರು.

2025-26ನೇ ಸಾಲಿನಿಂದ ಈ ನಿಯಮ ಜಾರಿಗೆ ಬರಲಿದೆ. ಈ ವರ್ಷ ಹಾಜರಾಗೋ ಎಲ್ಲಾ ವಿದ್ಯಾರ್ಥಿಗಳು, ರಿಪೀಟರ್ಸ್, ಖಾಸಗಿ ಅಭ್ಯರ್ಥಿಗಳಿಗೂ ಈ ನಿಯಮ ಜಾರಿಯಾಗಲಿದೆ.

CMYK CMYK CMYK CMYK

# ಒಳಮೀಸಲಾತಿ ಜಾರಿ ಭರವಸೆ: ಪ್ರತಿಭಟನೆ ವಾಪಾಸ್

• ಪ್ರಜೋದಯ ವರದಿ

**ನವದೆಹಲಿ:** ಕರ್ನಾಟಕದಲ್ಲಿ ಅಲೆಮಾರಿಗಳಿಗೆ ಶೇ.1ರಷ್ಟು ಒಳಮೀಸಲಾತಿ ಕೊಡಿಸುವುದಾಗಿ ಕಾಂಗ್ರೆಸ್ ನಾಯಕರು ಭರವಸೆ ನೀಡಿದ ಕಾರಣ ಎಐಸಿಸಿ ಕಚೇರಿ ಆವರಣದಲ್ಲಿ ನಡೆಸುತ್ತಿದ್ದ ಧರಣಿಯನ್ನು ಕರ್ನಾಟಕ ಅಸ್ಪೃಶ್ಯ ಅಲೆಮಾರಿ ಸಮುದಾಯಗಳ ಮಹಾ ಒಕ್ಕೂಟ ಬುಧವಾರ ಅಂತ್ಯಗೊಳಿಸಿತು.

ಪರಿಶಿಷ್ಟರ ಒಳಮೀಸಲಾತಿಯಲ್ಲಿ ನ್ಯಾ.ನಾಗಮೋಹನ್‌ದಾಸ್ ನೇತೃತ್ವದ ವರದಿಯಂತೆ ಅಲೆಮಾರಿ ಸಮುದಾಯಕ್ಕೆ ಶೇ.1ರಷ್ಟು ಮೀಸಲಾತಿ ನೀಡಲು ಮತ್ತು ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪನೆ ಹಾಗು ವಿಶೇಷ ಆರ್ಥಿಕ ಪ್ಯಾಕೇಜ್‌ಗೆ ರಾಜ್ಯ ಸರ್ಕಾರದಿಂದ ತಾತ್ವಿಕ ಒಪ್ಪಿಗೆ ದೊರಕಿದೆಯೆಂದು ಒಕ್ಕೂಟ ತಿಳಿಸಿದೆ.

ಎಐಸಿಸಿ ಕೇಂದ್ರ ಕಚೇರಿಯಲ್ಲಿ ಸಮುದಾಯದ ಮುಖಂಡರ ಜೊತೆಗೆ ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಮಾತುಕತೆ ನಡೆಸಿದರು. ಸಮುದಾಯದ ಬೇಡಿಕೆ ಈಡೇರಿಸಲು ಸರ್ಕಾರ ಸಿದ್ಧವಿದೆ. ದೀಪಾವಳಿ ಮುಗಿದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಸಭೆ ನಡೆಸಲಾಗುತ್ತದೆ. ಒಂದು ವೇಳೆ, ಸಮಸ್ಯೆ ಬಗೆಹರಿಯದಿದ್ದರೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಜೊತೆಗೆ ಸಭೆ ನಿಗದಿ ಮಾಡಿಸುವೆಯೆಂದು ಭರವಸೆ ನೀಡಿದರು.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲಾ ಹಾಗು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಜೊತೆ ದೂರವಾಣಿಯಲ್ಲಿ ಚರ್ಚಿಸಿದರು. ದಯವಿಟ್ಟು ರಾಜ್ಯಕ್ಕೆ ವಾಪಾಸ್ ಬನ್ನಿ. ಅಲೆಮಾರಿ ಸಮುದಾಯಗಳ ಸಮಸ್ಯೆ ಬಗೆಹರಿಸುತ್ತೇವೆಂದು ಮಹದೇವಪ್ಪ ಅವರು ಹೋರಾಟಗಾರರಿಗೆ ಮನವಿ ಮಾಡಿದರು.

ಈ ಹಿನ್ನಲೆಯಲ್ಲಿ ಧರಣಿ ಅಂತ್ಯಗೊಳಿಸಿ ರಾಜ್ಯಕ್ಕೆ ಮರಳಲು ಒಕ್ಕೂಟ ತೀರ್ಮಾನಿಸಿದೆ. ಕೊಟ್ಟ ಮಾತಿನಂತೆ ರಾಜ್ಯ ಸರ್ಕಾರ ಹಾಗು ಎಐಸಿಸಿ ಮುಖಂಡರು ನಡೆದುಕೊಳ್ಳುತ್ತಾರೆಂಬ ವಿಶ್ವಾಸವಿದೆ. ಒಂದು ವೇಳೆ ನಮ್ಮ ನಿರೀಕ್ಷೆ ಹುಸಿಯಾದರೆ, ಮತ್ತೆ ನವದೆಹಲಿಗೆ ಬರುವುದು ಖಚಿತವೆಂದು ಸಮುದಾಯದ ಮುಖಂಡರು ಎಚ್ಚರಿಕೆ ನೀಡಿದರು.

ಮಾತುಕತೆ ಸಂದರ್ಭದಲ್ಲಿ ಅಲೆಮಾರಿ ಸಮುದಾಯ ಮುಖಂಡರಾದ ಎ.ಎಸ್.ಪ್ರಭಾಕರ್, ಮಂಜುನಾಥ್ ದಾಯತ್ಕರ್, ಬಸವರಾಜ್ ನಾರಯಣಕರ್, ಚಾವಡಿ ಲೋಕೇಶ್, ಮಂಡ್ಯ ರಾಜಣ್ಣ, ಸಂದೀಪ್ ಕುಮಾರ್ ದಾಸರ್, ಶರಣಪ್ಪ ಚನ್ನದಾಸರ್, ಸಿಂದೋಳು ಸಮುದಾಯದ ಹನುಮಂತು, ಒಳ ಮೀಸಲಾತಿ ಹೋರಾಟ ಸಮಿತಿಯ ರಾಜ್ಯ ಸಂಚಾಲಕ ಕರಿಯಪ್ಪ ಗುಡಿ ಮನಿ, ಕರ್ನಾಟಕ ಜನಶಕ್ತಿಯ ಅಧ್ಯಕ್ಷ ನೂರ್ ಶ್ರೀಧರ್ ಹಾಗು ಎದ್ದೇಳು ಕರ್ನಾಟಕದ ತಾರಾ ರಾವ್ ಹಾಜರಿದ್ದರು.

# ಬೇಲೂರು ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಎಸ್.ಭಾಗ್ಯ

• ಪ್ರಜೋದಯ ವರದಿ



**ಬೇಲೂರು:** ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಎಸ್.ಭಾಗ್ಯ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು.

ಬಿ.ಎಲ್.ರಾಜೇಗೌಡ ಅವರ ವರ್ಗಾವಣೆ ಬಳಿಕ ಎಸ್.ಭಾಗ್ಯ ಅವರನ್ನು ನಿಯೋಜಿಸಲಾಗಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸು ವುದು, ಹಾಜರಾತಿ ಸುಧಾರಿಸುವುದು, ಶಿಕ್ಷಕರ ಸಹಕಾರದೊಂದಿಗೆ ಉತ್ತಮ ವಾತಾವರಣ ನಿರ್ಮಾಣ ಮಾಡುವುದೇ ಪ್ರಮುಖ ಗುರಿಯಾಗಿದೆ. ಎಲ್ಲಾ ಶಿಕ್ಷಕರ ಸಹಕಾರದೊಂದಿಗೆ ಶಿಕ್ಷಣ ವ್ಯವಸ್ಥೆ ಸುಧಾರಿಸುತ್ತೇನೆಂದರು.

ಕ್ಷೇತ್ರ ಸಮನ್ವಯಾಧಿಕಾರಿ ಶಿವಮರಿಯಪ್ಪ, ಶಿಕ್ಷಕರಾದ ಉದಯ ಕುಮಾರ್, ಶೇಖರ್, ಶಿವಕುಮಾರ್, ಚಂದ್ರಶೇಖರ್, ಇಸಿಒ ಶಿವಪ್ಪ, ಹರೀಶ್ ಇತರರಿದ್ದರು.

# ಕಾಲ್ತುಳಿತಕ್ಕೆ ಟಿವಿಕೆ ನಾಯಕನೇ ಹೊಣೆ: ಸ್ಟಾಲಿನ್

• ಪ್ರಜೋದಯ ವರದಿ

**ಚೆನ್ನೈ:** ಕರೂರಿನಲ್ಲಿ ಸಂಭವಿಸಿದ ಕಾಲ್ತುಳಿತಕ್ಕೆ ತಮಿಳಿಗ ವೆಟ್ರಿ ಕಳಗಂ (ಟಿವಿಕೆ) ಪಕ್ಷದ ನಾಯಕನೇ ಹೊಣೆ. ಪಕ್ಷದ ರ್‍ಯಾಲಿ ಸ್ಥಳಕ್ಕೆ ಅವರು ತಡವಾಗಿ ಬಂದಿದ್ದೇ ದುರ್ಘಟನೆಗೆ ಕಾರಣ ಎಂದು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ವಿಧಾನ ಸಭೆಯಲ್ಲಿ ಬುಧವಾರ ಹೇಳಿದರು.

ವಿರೋಧ ಪಕ್ಷಗಳ ಸದಸ್ಯರ ಗದ್ದಲದ ನಡುವೆಯೇ, ಕರೂರಿನಲ್ಲಿ ಸಂಭವಿಸಿದ ಕಾಲ್ತುಳಿತ ಕುರಿತು ಹೇಳಿಕೆ ನೀಡಿದ ಸ್ಟಾಲಿನ್, ಟಿವಿಕೆ ಪಕ್ಷದ ಮುಖ್ಯಸ್ಥ ಹಾಗೂ ನಟ ವಿಜಯ್ ಅವರ ಹೆಸರನ್ನು ಉಲ್ಲೇಖಿಸಲಿಲ್ಲ. ತಮ್ಮ ಮಾತಿನುದ್ದಕ್ಕೂ ಪಕ್ಷದ ನಾಯಕ ಎಂದೇ ಹೇಳಿದರು.

ಪಕ್ಷವು ಘೋಷಿಸಿದ ಪ್ರಕಾರ, ಪಕ್ಷದ ನಾಯಕ ಮಧ್ಯಾಹ್ನ 12ಕ್ಕೆ ವೇದಿಕೆಗೆ ಬರಬೇಕಿತ್ತು. ಆದರೆ, ಏಳು ಗಂಟೆಯಷ್ಟು ತಡವಾಗಿ, ರಾತ್ರಿ 7ಕ್ಕೆ ವೇದಿಕೆಗೆ ಬಂದರು. ಇದು ಕಾಲ್ತುಳಿತಕ್ಕೆ ಕಾರಣ ವಾಯಿತಲ್ಲದೇ, 41 ಜನರು ಪ್ರಾಣ ಕಳೆದು ಕೊಂಡರು ಎಂದು ಹೇಳಿದರು.

ಟಿವಿಕೆ ಪಕ್ಷವು ರ್‍ಯಾಲಿ ನಡೆಸುವುದಕ್ಕಾಗಿ ಎರಡು ಸ್ಥಳಗಳನ್ನು ಸೂಚಿಸಿತ್ತು. ಅವುಗಳನ್ನು ತಿರಸ್ಕರಿಸಿದ್ದ ಕರೂರು ಜಿಲ್ಲಾಡಳಿತ, ವೇಲುಸ್ವಾಮಿಪುರಂನಲ್ಲಿ ಬಹಿರಂಗ ಸಭೆ ನಡೆಸಲು ಅನುಮತಿ ನೀಡಿತ್ತು. ಅದಕ್ಕಾಗಿ 11 ಷರತ್ತುಗಳನ್ನು ವಿಧಿಸಿತ್ತು ಎಂದು ಸ್ಟಾಲಿನ್ ಸದನಕ್ಕೆ ವಿವರಿಸಿದರು. ಬಹಿರಂಗ ಸಭೆಗೆ ಪಕ್ಷದ ನಾಯಕ ಹಾಗೂ ಪಕ್ಷವು ಸಮರ್ಪಕ ವ್ಯವಸ್ಥೆ ಮಾಡಿರಲಿಲ್ಲ. ಕುಡಿಯುವ ನೀರು ಸೇರಿ ಮೂಲ ಸೌಕರ್ಯ ಒದಗಿಸಿರಲಿಲ್ಲ ಎಂದು ಟೀಕಿಸಿದರು.

# ಅಡಿಟೋರಿಯಂ ನಿರ್ಮಾಣಕ್ಕೆ ಭೂಮಿಪೂಜೆ

• ಪ್ರಜೋದಯ ವರದಿ



**ಅರಕಲಗೂಡು:** ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸ್ಥಾಪನೆಯ 50ನೇ ವರ್ಷದ ಸುವರ್ಣ ಮಹೋತ್ಸವದ ಅಂಗವಾಗಿ ತಾಲ್ಲೂಕು ಆಡಳಿತ ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪರಿಸರ ಜಾಗೃತಿ ಕಾರ್ಯಕ್ರಮ ಹಾಗು 3.50 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಕಾಲೇಜು ಅಡಿಟೋರಿಯಂ ಕಾಮಗಾರಿಗೆ ಶಾಸಕ ಎ.ಮಂಜು ಅವರು ಭೂಮಿ ಪೂಜೆ ಹಾಗು ನೂತನ ಗ್ರಂಥಾಲಯ ಕೊಠಡಿ ಉದ್ಘಾಟನೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಪರಿಸರ ರಕ್ಷಣೆಗೆ ಪ್ಲಾಸ್ಟಿಕ್ ಮಾಲಿನ್ಯ ನಿಯಂತ್ರಣಕ್ಕಾಗಿ ಕೇವಲ ಘೋಷಣೆಗಳು ಸಾಕಾಗುವುದಿಲ್ಲ, ಸರ್ಕಾರ ಮೊದಲು ಪ್ಲಾಸ್ಟಿಕ್ ತಯಾರಿಕಾ ಘಟಕಗಳನ್ನೇ ಬಂದ್ ಮಾಡಿಸಬೇಕೆಂದು ಹೇಳಿದರು.

ಸಿ.ಡಿ.ಸಿ. ಉಪಾಧ್ಯಕ್ಷ ಬಾಲಾಜಿ, ಪ್ರಾಂಶುಪಾಲ ಎ.ಎಲ್.ಮಂಜುನಾಥ್, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ನರಸೇಗೌಡ, ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಪುಟ್ಟರಾಜು, ಉಪನ್ಯಾಸಕರು ಉಪಸ್ಥಿತರಿದ್ದರು.

# ಯುವಕರು ದುಶ್ಚಟಕ್ಕೆ ದಾಸರಾಗಬೇಡಿ: ಬಸವ ರಾಜೇಂದ್ರ ಶ್ರೀ



• ಪ್ರಜೋದಯ ವರದಿ

**ಅರಕಲಗೂಡು:** ಚಿಕ್ಕ ವಯಸ್ಸಿನಲ್ಲೇ ಕೆಲವರು ದುಶ್ಚಟಗಳಿಗೆ ದಾಸರಾಗಿ ಆರೋಗ್ಯ ಹಾಳು ಮಾಡಿಕೊಳ್ಳುವುದಲ್ಲದೆ ಕುಟುಂಬಕ್ಕೆ ಹೊರೆಯಾಗುತ್ತಿದ್ದಾರೆ ಎಂದು ಕೆಸವತ್ತೂರು ವಿರಕ್ತ ಮಠದ ಶ್ರೀ ಬಸವ ರಾಜೇಂದ್ರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ರಾಮನಾಥಪುರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಧರ್ಮಸ್ಥಳ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿರುವ ಮದ್ಯವರ್ಜನ ಶಿಬಿರದ ಸಾನ್ನಿಧ್ಯ ವಹಿಸಿ ಆರ್ಶೀವಚನ ನೀಡಿದ ಶ್ರೀಗಳು, ಸಂಸಾರದ ಬದುಕು ಕಟ್ಟಿಕೊಳ್ಳಲು ದುಶ್ಚಟಗಳನ್ನು ದೂರ ಮಾಡಿ ಗೌರವ ಯುತವಾಗಿ ಬದುಕಬೇಕೆಂದು ಹೇಳಿದರು.

ಮುಖಂಡರಾದ ನರಸಿಂಹ ಮೂರ್ತಿ, ಲೋಕೇಶ್, ವಿರೂಪಾಕ್ಷ, ಕಾಳಬೋಯಿ, ಶ್ರೀನಿವಾಸ್ ಇತರರು ಹಾಜರಿದ್ದರು.

# ಎಸ್‌ಬಿಐ ಮುಂಭಾಗ ಗೂಡ್ಸ್ ಆಟೋಗಳ ನಿಲುಗಡೆ: ಸಾರ್ವಜನಿಕರ ವಿರೋಧ



• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ಮುಖ್ಯ ರಸ್ತೆಯಲ್ಲಿರುವ ಎಸ್‌ಬಿಐ ಕಚೇರಿ ಮುಂಭಾಗ ಗೂಡ್ಸ್ ಆಟೋಗಳ ನಿಲುಗಡೆಗೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ್ದಾರೆ.

ಬಿಎಂ ರಸ್ತೆಯಲ್ಲಿರುವ ಎಸ್‌ಬಿಐ ಬ್ಯಾಂಕ್ ಮುಂಭಾಗ ಹೆದ್ದಾರಿಗೆ ಹೊಂದಿಕೊಂಡಂತೆ ಇರುವ ಜಾಗದಲ್ಲಿ ಗೂಡ್ಸ್ ವಾಹನಗಳನ್ನು ನಿಲುಗಡೆ ಮಾಡಲಾಗುತ್ತಿದ್ದು, ಅದರಿಂದ ಸಾರ್ವಜನಿಕರು ತಮ್ಮ ವಾಹನಗಳನ್ನು ನಿಲುಗಡೆ ಮಾಡಲು ಜಾಗವಿಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಪಟ್ಟಣದ ಮುಖ್ಯ ರಸ್ತೆಯಲ್ಲಿರುವ ಎಸ್‌ಬಿಐ ಸಮೀಪ ಹಲವಾರು ಬ್ಯಾಂಕ್, ಅಂಗಡಿ ಹಾಗೂ ಸರ್ಕಾರಿ ಕಚೇರಿಗಳಿದ್ದು ದಿನನಿತ್ಯ ಸಾವಿರಾರು ಜನರು ವಾಹನಗಳಲ್ಲಿ ಬರುತ್ತಾರೆ. ಹೀಗೆ ಬರುವವರು ಎಸ್‌ಬಿಐ ಬ್ಯಾಂಕ್ ಮುಂಭಾಗ ವಾಹನ ನಿಲುಗಡೆ ಮಾಡುತ್ತಿದ್ದರು. ಆದರೆ ಕಳೆದ ಕೆಲವು ದಿನಗಳಿಂದ ಈ ಜಾಗದಲ್ಲಿ ಗೂಡ್ಸ್ ಆಟೋಗಳನ್ನು ನಿಲುಗಡೆ ಮಾಡಲಾಗುತ್ತಿರುವುದರಿಂದ ಇತರರಿಗೆ ತೊಂದರೆಯಾಗುತ್ತಿದೆ. ಗೂಡ್ಸ್ ವಾಹನಗಳಿಗೆ ಪ್ರತ್ಯೇಕ ವ್ಯವಸ್ಥೆ ಮಾಡಿಕೊಡಬೇಕೆಂದು ಹಲಸುಲಿಗೆ ಮಂಜುನಾಥ್ ಆಗ್ರಹಿಸಿದ್ದಾರೆ.

## ಆಂಧ್ರಪ್ರದೇಶ ಸಚಿವ ನಾರಾ ಲೋಕೇಶ್

# ಕರ್ನಾಟಕ ಅಸಮರ್ಥವಾದರೆ ಏನು ಮಾಡಲು ಸಾಧ್ಯ

• ಪ್ರಜೋದಯ ವರದಿ



**ಹೈದರಾಬಾದ್:** ಬೆಂಗಳೂರು ಮೂಲದ ನವೋದ್ಯಮಗಳನ್ನು ಆಂಧ್ರ ಪ್ರದೇಶಕ್ಕೆ ವಿಸ್ತರಿಸುವ ಅಥವಾ ಸ್ಥಳಾಂತರಿಸುವ ಕುರಿತು ಮಾತುಕತೆಗಳು ನಡೆಯುತ್ತಿವೆಯೆಂದು ಆಂಧ್ರ ಪ್ರದೇಶ ಸಚಿವ ನಾರಾ ಲೋಕೇಶ್ ಹೇಳಿದ್ದಾರೆ.

ಉದ್ಯಮಗಳು ಮತ್ತು ಹೂಡಿಕೆ ವಿಚಾರವಾಗಿ ಕರ್ನಾಟಕದೊಂದಿಗೆ ತೀವ್ರ ಪೈಪೋಟಿ ನಡೆಸುತ್ತಿರುವ ನೆರೆಯ ಆಂಧ್ರ ಪ್ರದೇಶ ಇದೀಗ ಬೆಂಗಳೂರು ಮೂಲದ ನವೋದ್ಯಮಗಳನ್ನು ತನ್ನಲ್ಲಿಗೆ ಸ್ಥಳಾಂತರಿಸಿಕೊಳ್ಳಲು ಮುಂದಾಗಿದೆ.

ನಾವು ಪ್ರತಿ ರೂಪಾಯಿ ಹೂಡಿಕೆಗೂ ಸ್ಪರ್ಧಿಸುತ್ತೇವೆ. ಉದ್ಯೋಗ ಸೃಷ್ಟಿ ಮತ್ತು ಉತ್ತಮ ವ್ಯಾಪಾರ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವತ್ತ ಗಮನ ಹರಿಸಿದ್ದೇವೆ. ಬಲವಾದ ಮೂಲ ಸೌಕರ್ಯ, 247 ವಿದ್ಯುತ್ ಸರಬರಾಜು ಅನಂತಪುರದಲ್ಲಿರುವ ಕಿಯಾ ಕೇಂದ್ರದಂತಹ ಅಭಿವೃದ್ಧಿ ಹೊಂದುತ್ತಿರುವ ಕ್ಲಸ್ಟರ್‌ಗಳಿಂದ ಬೆಂಬಲಿತವಾಗಿದೆ. ಆಂಧ್ರಕ್ಕೆ ವಿಸ್ತರಣೆ ಅಥವಾ ಸ್ಥಳಾಂತರವನ್ನು ಅನ್ವೇಷಿಸುವ ಬೆಂಗಳೂರು ಮೂಲದ ಸ್ಟಾರ್ಟ್‌ಅಪ್‌ಗಳೊಂದಿಗೆ ಮಾತುಕತೆ ನಡೆಯುತ್ತಿದೆಯೆಂದು ನಾರಾ ಲೋಕೇಶ್ ಹೇಳಿದ್ದಾರೆ.

ಇನ್ನು ಬೆಂಗಳೂರಿನಲ್ಲಿ ಗುಂಡಿಗಳಿಂದ ಕೂಡಿದ ರಸ್ತೆಗಳು ಮತ್ತು ಕಸದ ರಾಶಿಯಿಂದ ಕೂಡಿದ ಬೀದಿಗಳು ಮತ್ತು ಅದರ ಪರಿಣಾಮವಾಗಿ ಹೂಡಿಕೆ ಅವಕಾಶಗಳಿಗಾಗಿ ಕರ್ನಾಟಕ ಮತ್ತು ಆಂಧ್ರಪ್ರದೇಶಗಳು ಪೈಪೋಟಿಯನ್ನು ಮುಂದುವರೆಸಿವೆ. ಈಗಾಗಲೇ ಇಂಟರ್ನೆಟ್ ದೈತ್ಯ ಗೂಗಲ್ ಮೆಗಾ ಡೇಟಾ ಮತ್ತು ಹಬ್‌ಗಾಗಿ 15 ಬಿಲಿಯನ್ ಡಾಲರ್ ಹೂಡಿಕೆ ಮಾಡಲು ಆಂಧ್ರ ಪ್ರದೇಶದ ವಿಶಾಖಪಟ್ಟಣವನ್ನು ಆಯ್ಕೆ ಮಾಡಿದ ನಂತರ ಮತ್ತಷ್ಟು ಉದ್ಯಮಗಳ ಆಕರ್ಷಿಸುವ ಕೆಲಸ ಕೂಡ ಭರದಿಂದ ಸಾಗಿದೆ.

ಈ ಬಗ್ಗೆಯೂ ಮಾತನಾಡಿದ ನಾರಾ ಲೋಕೇಶ್, ಕರ್ನಾಟಕ ಸರ್ಕಾರ ಅಸಮರ್ಥವಾಗಿದ್ದರೆ, ನಾನು ಏನು ಮಾಡಲು ಸಾಧ್ಯ. ಅವರ ಸ್ವಂತ ಕೈಗಾರಿಕೋದ್ಯಮಿಗಳು ಮೂಲಸೌಕರ್ಯ ಕೆಟ್ಟದಾಗಿದೆ ಎಂದು ಹೇಳುತ್ತಿದ್ದಾರೆ. ವಿದ್ಯುತ್ ಕಡಿತ, ಮೂಲಭೂತ ಸೌಕರ್ಯ ಕೊರತೆಗಳಂತಹ ಸಮಸ್ಯೆಗಳನ್ನು ಸರಿಪಡಿಸಬೇಕು ಎಂದು ಹೇಳಿದರು.

ಅಲ್ಲದೆ ತಮ್ಮ ರಾಜ್ಯವು ಈಗಾಗಲೇ 120 ಬಿಲಿಯನ್ ಹೂಡಿಕೆಯನ್ನು ಆಕರ್ಷಿಸಿದ್ದು, ಆಂಧ್ರ ಪ್ರದೇಶದಲ್ಲಿನ ಸುಧಾರಣೆಗಳ ತ್ವರಿತ ವೇಗವು ಕರ್ನಾಟಕದೊಂದಿಗೆ ಸ್ಪರ್ಧಿಸುವಂತೆ ಮಾಡಿದೆ. ಆದಾಗ್ಯೂ, ಈ ವೇಗದಿಂದ ಚಿಂತಿತರಾಗಿರುವ ರಾಜ್ಯಗಳು ಪ್ರತಿಕ್ರಿಯಿಸಬೇಕಾಯಿತು. ಅದು ಅವರ ಸವಾಲು.. ಎಂದು ನಾರಾ ಲೋಕೇಶ್ ಕರ್ನಾಟಕ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೆಸರು ಉಲ್ಲೇಖಿಸದೇ ಹೇಳಿದರು.

ರಾಜ್ಯವು ಹೂಡಿಕೆದಾರರಿಗೆ ಹೆಚ್ಚು ಆಕರ್ಷಕವಾಗಿದೆ. ನಮ್ಮ ಡಬಲ್-ಎಂಜಿನ್ ಸರ್ಕಾರ, ತ್ವರಿತ ಕಾರ್ಮಿಕ ಸುಧಾರಣೆಗಳು ಮತ್ತು ಬುಲೆಟ್ ಟ್ರೈನ್ ವೇಗದಲ್ಲಿ ಅಭಿವೃದ್ಧಿಯನ್ನು ಚಾಲನೆ ಮಾಡುವ ಬಲವಾದ ಕೇಂದ್ರ-ರಾಜ್ಯ ಸಮನ್ವಯಕ್ಕೆ ಮನ್ನಣೆ ನೀಡುತ್ತಿದೆ. ವಿಶಾಖಪಟ್ಟಣಂನಲ್ಲಿರುವ ಗೂಗಲ್‌ನ 15 ಬಿಲಿಯನ್ ಡಾಲರ್ ಡೇಟಾ ಸೆಂಟರ್ ಅಮೆರಿಕದ ಹೊರಗೆ ಭಾರತದ ಅತಿದೊಡ್ಡ ಯೋಜನೆಯಾಗಿದೆ ಮತ್ತು 1.8 ಲಕ್ಷಕ್ಕೂ ಹೆಚ್ಚು ಉದ್ಯೋಗಗಳನ್ನು ಸೃಷ್ಟಿಸುತ್ತದೆ ಎಂದು ಹೇಳಿದರು.

# ಜವೇನಹಳ್ಳಿ ಕೆರೆ ಸುತ್ತ ಲಯನ್ಸ್‌ನಿಂದ ಶ್ರಮದಾನ



• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ಜಾತ್ರಾ ಮಹೋತ್ಸವ ಹಾಗು ಅಂತರ ರಾಷ್ಟ್ರೀಯ ಸೇವಾ ದಿನದ ಅಂಗವಾಗಿ ಬುಧವಾರ ಹಾಸನಾಂಬ ಲಯನ್ಸ್ ಸಂಸ್ಥೆಯಿಂದ ನಗರದ ಜವೇನಹಳ್ಳಿ ಕೆರೆ ಸುತ್ತಲು ಶ್ರಮದಾನ ಹಮ್ಮಿಕೊಳ್ಳಲಾಗಿತ್ತು.

ಮಹಾನಗರ ಪಾಲಿಕೆ ಸದಸ್ಯೆ ಅಶ್ವಿನಿ ಮಹೇಶ್, ಸ್ಥಳೀಯರು, ಹಾಸನಾಂಬ ಲಯನ್ಸ್ ಸಂಸ್ಥೆಯ ಸದಸ್ಯರು ಭಾಗ ವಹಿಸಿದರು. ಕೆರೆ ಸುತ್ತಲೂ ಬೆಳೆದಿದ್ದ ಗಿಡಗಂಟಿಗಳನ್ನು ತೆರವುಗೊಳಿಸಿ ಪ್ಲಾಸ್ಟಿಕ್ ವಸ್ತುಗಳನ್ನು ಒಟ್ಟುಗೂಡಿಸಿ ಕಸದ ವಾಹನಕ್ಕೆ ಹಾಕಲಾಯಿತು. ಅನಗತ್ಯ ವಸ್ತುಗಳನ್ನು ಕೆರೆಗೆ ಬಿಸಾಡಿ ಪರಿಸರ ಹಾಳು ಮಾಡಬಾರದೆಂದು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಹಾಸನಾಂಬ ಲಯನ್ಸ್ ಸಂಸ್ಥೆ ಅಧ್ಯಕ್ಷ ಕೆ.ಕೆ.ಮೋಹನಕುಮಾರ್, ಜಿಲ್ಲಾ ಅಸೋಸಿಯೇಟ್ ಕಾರ್ಯದರ್ಶಿ ತಿಮ್ಮರಾಯಶೆಟ್ಟಿ, ಸ್ವಚ್ಛ ಭಾರತ್ ಅಭಿಯಾನದ ಮುಖ್ಯ ಸಂಯೋಜಕ ಕೆ.ಪಿ. ರಾಜೇಗೌಡ, ಕಾರ್ಯದರ್ಶಿ ಎಂ.ಹೆಚ್.ಮಂಜುನಾಥ್, ಖಜಾಂಚಿ ಹರೀಶ್ ಕುಮಾರ್, ಹೆಚ್.ಲಕ್ಷಮ್ಮ, ಗೌರಮ್ಮ ಇತರರಿದ್ದರು.

# ಬಸ್ ಡಿಕ್ಕಿ: ವಿದ್ಯಾರ್ಥಿ ಸಾವು

• ಪ್ರಜೋದಯ ವರದಿ

**ಹಾಸನ:** ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಗೊರೂರು ಬಸ್ ನಿಲ್ದಾಣ ಸಮೀಪ ನಡೆದಿದೆ.

ರಾಯಚೂರುಜಿಲ್ಲೆ ಮಡ್ಡಿ ಪೇಟೆಯ ವರುಣ್ (21) ಮೃತ ಯುವಕ. ಹಾಸನದ ನವಕೀಸ್ ಇಂಜಿನೀಯರಿಂಗ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದ ವರುಣ್ ಸ್ನೇಹಿತ ಬಡೇಸಾಬ್ ಜೊತೆಗೆ ಅ.13ರಂದು ಪ್ರವಾಸಕ್ಕೆಂದು ಅರಕಲಗೂಡು, ಶನಿವಾರಸಂತೆಗೆ ತೆರಳಿದ್ದ. ಗೊರೂರು ಬಸ್ ನಿಲ್ದಾಣ ಸಮೀಪ ಬರುತ್ತಿದ್ದಾಗ ಹಾಸನ ಕಡೆಯಿಂದ ವೇಗವಾಗಿ ಬಂದ ಕೆಎಸ್‌ಆರ್‌ಟಿಸಿ ಬಸ್ ಚಾಲಕನ ನಿರ್ಲಕ್ಷ್ಯದಿಂದ ಯಾವ ಸೂಚನೆ ನೀಡದೆ ಏಕಾಏಕಿ ತಿರುಗಿಸಿದ್ದರಿಂದ ಬೈಕ್‌ಗೆ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ವರುಣ್ ಹಾಗು ಬಡೇಸಾಬ್ ಗಂಭೀರ ಗಾಯಗೊಂಡಿದ್ದರು. ಎದೆ ಭಾಗಕ್ಕೆ ಗಂಭೀರ ಪೆಟ್ಟು ಬಿದ್ದ ಹಿನ್ನಲೆಯಲ್ಲಿ ವರುಣ್‌ನನ್ನು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆಫಲಿಸದೆ ಮಂಗಳವಾರ ಮೃತಪಟ್ಟಿದ್ದಾನೆ. ಗೊರೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಕ್ಕಳ ಏಳಿಗೆಯಲ್ಲಿ ಶಿಕ್ಷಕರ ಪಾತ್ರ ಮುಖ್ಯವಾದುದು



• ಪ್ರಜೋದಯ ವರದಿ

**ಬೇಲೂರು:** ಗ್ರಾಮೀಣ ಭಾಗದ ಮಕ್ಕಳನ್ನು ವಿದ್ಯಾವಂತರನ್ನಾಗಿಸುವಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿರುತ್ತದೆಂದು ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಉದಯ್ ಕುಮಾರ್ ಅವರು ಹೇಳಿದರು.


ಪಟ್ಟಣದ ವಿದ್ಯಾ ವಿಕಾಸ ಶಾಲೆಯಲ್ಲಿ ರೋಟರಿ ಕ್ಲಬ್‌ನಿಂದ ಆಯೋಜಿಸಿದ್ದ ನಿವೃತ್ತ ಶಿಕ್ಷಕರಿಗೆ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳನ್ನು ಅವರ ಆಸಕ್ತಿಗೆ ತಕ್ಕಂತೆ ತಿದ್ದಿ, ಶಿಕ್ಷಣ, ಶಿಸ್ತು ಕಲಿಸುವುದು ಶಿಕ್ಷಕರ ಜವಾಬ್ದಾರಿ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಶಿಕ್ಷಕರು ಜವಾಬ್ದಾರಿ ಅರಿತು ಕಾರ್ಯ ನಿರ್ವಹಿಸಬೇಕು. ಶಿಕ್ಷಕ ವೃತ್ತಿ ಬಹಳ ಮಹತ್ವವಾದದ್ದು. ಸರ್ಕಾರಿ ಸೇವೆಯಲ್ಲಿ 35 ವರ್ಷ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗುತ್ತಿರುವುದು ಸುಲಭದ ವಿಷಯವಲ್ಲ. ನಾವು ನಿವೃತ್ತರಾದರೂ ನಮ್ಮ ಸುತ್ತಲಿನ ಮಕ್ಕಳು ವ್ಯಾಸಂಗ ಮಾಡುವಂತೆ ಪ್ರೇರೇಪಿಸಬೇಕು. ಮುಂದೆಯೂ ಮಕ್ಕಳಿಗೆ ಮಾರ್ಗದರ್ಶನ ಮಾಡಬೇಕೆಂದು ಸಲಹೆ ನೀಡಿದರು.

ರೋಟರಿ ಕ್ಲಬ್ ಅಧ್ಯಕ್ಷ ಬಿ.ಎ.ರಂಗನಾಥ್ ಅವರು ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಸಂಸ್ಥೆಯಿಂದ 35ಕ್ಕೂ ಹೆಚ್ಚು ನಿವೃತ್ತ ಶಿಕ್ಷಕರನ್ನು ಗೌರವಿಸಿದ್ದೇವೆ. ಶಿಕ್ಷಕರು ತ್ಯಾಗ ಮತ್ತು ಸಮರ್ಪಣಾ ಮನೋಭಾವದಿಂದಲೇ ಶಿಷ್ಯರ ಸ್ಮೃತಿ ಪಟಲದಲ್ಲಿ ಉಳಿಯುತ್ತಾರೆ. ಜಗತ್ತಿನ ಶ್ರೇಷ್ಠ ವ್ಯಕ್ತಿಗಳ ನಿರ್ಮಾಣ ಶಿಕ್ಷಕರಿಂದ ಮಾತ್ರ ಸಾಧ್ಯ. ವಿದ್ಯಾರ್ಥಿಗಳ ಜವಾಬ್ದಾರಿಯ ಬಗ್ಗೆ ಕಲಿಸಿ ಅವರ ಭವಿಷ್ಯ ಹಸನಾಗಿಸುವ ಶಿಲ್ಪಿಗಳೇ ಶಿಕ್ಷಕರೆಂದರು.

ರೋಟರಿ ಕ್ಲಬ್ ಕಾರ್ಯದರ್ಶಿ ಹೆಚ್.ಕೆ.ರಮೇಶ್, ಮಾಜಿ ಅಧ್ಯಕ್ಷ ಶಂಭುಗೌಡ, ಹಿರಿಯ ಸದಸ್ಯರಾದ ಬಿ.ಎಲ್.ರಾಜೇಗೌಡ, ಮೂಗಪ್ಪಗೌಡ, ವಿನೋದ್‌ಗೌಡ, ಸದಸ್ಯರಾದ ಗಣೇಶ್,ಸಂದೇಶ್,ಪುಟ್ಟ, ಯೋಗೇಶ್ ಗೌಡ, ಬಿ.ಬಿ.ಶಿವರಾಜು ಇದ್ದರು.

# ಕ್ರಿಕೆಟ್ ವೃತ್ತಿ ಜೀವನದಲ್ಲಿ ಕುಲದೀಪ್ ಶ್ರೇಷ್ಠ ಸಾಧನೆ

• ಪ್ರಜೋದಯ ವರದಿ



**ದುಬೈ:** ದೆಹಲಿಯಲ್ಲಿ ಅ.14ರಂದು ಮುಕ್ತಾಯಗೊಂಡ ವೆಸ್ಟ್ ಇಂಡೀಸ್ ವಿರುದ್ಧದ ಸರಣಿಯ ಅಂತಿಮ ಟೆಸ್ಟ್ ನಲ್ಲಿ 8 ವಿಕೆಟ್ ಪಡೆದು ಭಾರತದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಸ್ಪಿನ್ನರ್ ಕುಲದೀಪ್ ಯಾದವ್ ಬುಧವಾರ ಬಿಡುಗಡೆಯಾಗಿರುವ ಐಸಿಸಿ ಪುರುಷರ ಟೆಸ್ಟ್ ಬೌಲರ್‌ಗಳ ಶ್ರೇಯಾಂಕದಲ್ಲಿ 14ನೇ ಸ್ಥಾನಕ್ಕೇರಿದ್ದಾರೆ.

ಈ ಪಂದ್ಯಕ್ಕೂ ಮೊದಲು ಕುಲದೀಪ್ ಯಾದವ್ ಅವರು 21ನೇ ಸ್ಥಾನದಲ್ಲಿದ್ದರು. ವಿಂಡೀಸ್ ವಿರುದ್ಧದ ಪಂದ್ಯದಲ್ಲಿ ಉತ್ತಮ ಬೌಲಿಂಗ್ ದಾಳಿ ನಡೆಸಿದ್ದಕ್ಕಾಗಿ 14ನೇ ಸ್ಥಾನಕ್ಕೇರಿದ್ದಾರೆ. ಇದು ಅವರ ಕ್ರಿಕೆಟ್ ವೃತ್ತಿ ಜೀವನದ ಅತ್ಯುತ್ತಮ ಸಾಧನೆಯಾಗಿದೆ. ಮಾತ್ರವಲ್ಲ, 2ನೇ ಪಂದ್ಯದಲ್ಲಿ ಅವರು ಉತ್ತಮ ಬೌಲಿಂಗ್ ಪ್ರದರ್ಶನ ಮಾಡಿದ್ದಕ್ಕಾಗಿ ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ಕೂಡ ಪಡೆದು ಕೊಂಡರು.

ಇನ್ನು, ವಿಂಡೀಸ್ ವಿರುದ್ಧದ 2ನೇ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 175 ರನ್ ಗಳಿಸಿದ್ದ ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ ಬ್ಯಾಟಿಂಗ್ ಶ್ರೇಯಾಂಕದಲ್ಲಿ 2 ಸ್ಥಾನ ಬಡ್ತಿ ಪಡೆದು 5ನೇ ಸ್ಥಾನಕ್ಕೆ ತಲುಪಿದ್ದಾರೆ. ಕೆ.ಎಲ್.ರಾಹುಲ್ ಕೂಡ ಎರಡು ಸ್ಥಾನ ಬಡ್ತಿ ಪಡೆದು 33ನೇ ಸ್ಥಾನಕ್ಕೆ ತಲುಪಿದ್ದಾರೆ.

**ಏಕದಿನದಲ್ಲಿ ರಶೀದ್ ನಂ.1 ಬೌಲರ್**

ಅಬುಧಾಬಿಯಲ್ಲಿ ಬಾಂಗ್ಲಾದೇಶ ವಿರುದ್ಧ ನಡೆದ ಸರಣಿ ಯಲ್ಲಿ ಅಫ್ಘಾನಿಸ್ತಾನ ತಂಡ 3-0 ಅಂತರದಲ್ಲಿ ಗೆಲ್ಲಲು ಸಹಕಾರಿಯಾಗಿದ್ದ ಸ್ಪಿನ್ನರ್ ರಶೀದ್ ಖಾನ್ ಏಕದಿನ ಬೌಲಿಂಗ್ ಶ್ರೇಯಾಂಕದಲ್ಲಿ ಅಗ್ರ ಸ್ಥಾನಕ್ಕೇರಿದ್ದಾರೆ. ಇನ್ನೂ ಐಸಿಸಿ ಏಕದಿನ ಬ್ಯಾಟಿಂಗ್ ರ್‍ಯಾಂಕಿಂಗ್‌ನಲ್ಲಿ ಅಫ್ಘಾನಿಸ್ತಾನದ ಬ್ಯಾಟರ್ ಇಬ್ರಾಹಿಂ ಜದ್ರಾನ್ 8 ಸ್ಥಾನಗಳ ಜಿಗಿತ ಕಂಡು ವೃತ್ತಿಜೀವನದ ಶ್ರೇಷ್ಠ ಸಾಧನೆ ಮಾಡಿದ್ದಾರೆ. ಸದ್ಯ ಅವರು ಏಕದಿನ ಬ್ಯಾಟಿಂಗ್ ರ್‍ಯಾಂಕಿಂಗ್‌ನಲ್ಲಿ 2ನೇ ಸ್ಥಾನದಲ್ಲಿದ್ದಾರೆ. ಇದಕ್ಕೂ ಮೊದಲು ಯಾವುದೇ ಅಫ್ಘಾನಿಸ್ತಾನದ ಬ್ಯಾಟರ್ ಈ ಸ್ಥಾನ ಪಡೆದಿಲ್ಲ.

# ಇತಿಹಾಸ ತಿರುಚಲು ಭಾರತ ಯತ್ನ: ಪಾಕ್

• ಪ್ರಜೋದಯ ವರದಿ

**ಇಸ್ಲಾಮಾಬಾದ್:** ವಿಲಕ್ಷಣವಾದ ಮತ್ತು ಬಾಲಿವುಡ್ ಸಿನಿಮಾ ಕತೆಗಳಂತೆ ಇತಿಹಾಸವನ್ನು ತನಗೆ ಬೇಕಾದ ರೀತಿಯಲ್ಲಿ ತಿರುಚಲು ಭಾರತ ಯತ್ನಿಸುತ್ತಿದೆಯೆಂದು ಪಾಕಿಸ್ತಾನ ಸೇನೆ ಬುಧವಾರ ಆರೋಪಿಸಿದೆ.

ಭಾರತ ಸೇನೆಯ ಮಿಲಿಟರಿ ಕಾರ್ಯಾಚರಣೆಗಳ ಮಹಾ ನಿರ್ದೇಶಕ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ಅವರು, ಆಪರೇಷನ್ ಸಿಂಧೂರ ಸಂದರ್ಭದಲ್ಲಿ ಪಾಕಿಸ್ತಾನ ಸೇನೆಯು ಸುಮಾರು 100 ಸೈನಿಕರನ್ನು ಕಳೆದುಕೊಂಡಿದೆಯೆಂದು ಹೇಳಿಕೆ ನೀಡಿದ್ದರು.

ಈ ಬೆನ್ನಲ್ಲೇ ಪಾಕಿಸ್ತಾನ ಸೇನೆ ಪ್ರತಿಕ್ರಿಯೆ ನೀಡಿದೆ. ಪರಮಾಣು ಶಕ್ತಿಯನ್ನು ಹೊಂದಿರುವ ದೇಶದ ಸೇನಾನಾಯಕರು ಇಂಥ ಬೇಜವಾಬ್ದಾರಿ ಹೇಳಿಕೆಗಳನ್ನು ನೀಡುವುದು ವಿಷಾದನೀಯವೆಂದು ಅದು ಹೇಳಿಕೆಯಲ್ಲಿ ತಿಳಿಸಿದೆ.

# ನ.2ಕ್ಕೆ ಹಲ್ಮಿಡಿಯಲ್ಲಿ ಕವಿಗೋಷ್ಠಿ-ಗೀತ ಗಾಯನ ಸ್ಪರ್ಧೆ

• ಪ್ರಜೋದಯ ವರದಿ



**ಬೇಲೂರು:** ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ಮಟ್ಟದ ಕವಿಗೋಷ್ಠಿ ಹಾಗು ಗೀತ ಗಾಯನ ಸ್ಪರ್ಧೆಯನ್ನು ನ.2ರ ಭಾನುವಾರ ತಾಲ್ಲೂಕಿನ ಹಲ್ಮಿಡಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಬರಹಗಾರರ ಸಂಘದ ಜಿಲ್ಲಾಧ್ಯಕ್ಷ ಡಿ.ಸುಂದರೇಶ್ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಬರಹಗಾರರ ಸಂಘವು ಐದು ವರ್ಷ ಗಳಿಂದ ಕವಿಗೋಷ್ಠಿ ಆಯೋಜನೆ ಮೂಲಕ ಬರಹಗಾರರು, ಕವಿ, ಕಲಾವಿದರು, ಸಾಹಿತ್ಯಾಸಕ್ತ ರನ್ನು ಒಂದೇ ವೇದಿಕೆಗೆ ಕರೆತರಲಾಗುತ್ತಿದೆ. ಪ್ರತಿವರ್ಷ ಹೊಸ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸು ವುದು ನಮ್ಮ ಉದ್ದೇಶವೆಂದರು.

ರಾಜ್ಯ ಬರಹಗಾರರ ಸಂಘದ ಜಿಲ್ಲಾ ಗೌರವಾಧ್ಯಕ್ಷ ವೆಂಕಟೇಶ್ ಅವರು ಮಾತನಾಡಿ, ಪ್ರತಿ ವರ್ಷ ರಾಜ್ಯ ಬರಹಗಾರರ ಸಂಘದಿಂದ ಒಂದೊಂದು ಪ್ರಸಿದ್ಧ ಸ್ಥಳಗಳಲ್ಲಿ ಕನ್ನಡ ಮತ್ತು ವಿವಿಧ ಕ್ಷೇತ್ರದ ಕಲಾವಿದರು, ಸಮಾಜ ಸೇವಕರನ್ನು ಗೌರವಿಸುತ್ತಿದ್ದೆವು. ಆದರೆ ಈ ಬಾರಿ ಕನ್ನಡಕ್ಕೆ ಪಥಮ ಶಿಲಾ ಶಾಸನ ಕೊಟ್ಟ ಹಲ್ಮಿಡಿ ಗ್ರಾಮವನ್ನು ಆಯ್ಕೆ ಮಾಡಲಾಗಿದೆ. ಕಾರ್ಯ ಕ್ರಮದಲ್ಲಿ ಸ್ಥಳೀಯ ಕವಿಗಳು ಮತ್ತು ಕಲಾವಿದರಿಗೆ ಆದ್ಯತೆ ನೀಡಲಾಗುವುದು. ಪ್ರಮುಖವಾಗಿ ಕವಿಗಾಯನ, ಕಲಾಕುಂಚ, ಸಂಗೀತ ಕಾರ್ಯಕ್ರಮ, ಸಾಹಿತ್ಯ ಚರ್ಚೆ ಮತ್ತು ಕವಿತಾ ವಿಮರ್ಶೆ ಒಂದೇ ವೇದಿಕೆಯಲ್ಲಿ ನಡೆಯಲಿದೆ. 100ಕ್ಕೂ ಹೆಚ್ಚು ಕವಿಗಳು, ಸಾಹಿತ್ಯಾಸಕ್ತರು, ವಿದ್ಯಾರ್ಥಿ ಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬರಹಗಾರ ಸಂಘದ ಚನ್ನೇಗೌಡ, ಜಿಲ್ಲಾ ಕಾರ್ಯದರ್ಶಿ ದಿಬ್ಬೂರು ರಮೇಶ್, ಡಾ.ರಾಜ್‌ಕುಮಾರ್ ಸಂಘದ ಅಧ್ಯಕ್ಷ ತೀರ್ಥಂಕರ್ ಇದ್ದರು.

# 57 ಜೆಡಿ(ಯು) ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ

• ಪ್ರಜೋದಯ ವರದಿ



**ಪಟ್ನಾ:** ಬಿಹಾರ ವಿಧಾನಸಭೆ ಚುನಾವಣೆಗೆ 57 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಜನತಾದಳ (ಯುನೈಟೆಡ್) ಬುಧವಾರ ಬಿಡುಗಡೆ ಮಾಡಿದೆ.

ಸೀಟು ಹಂಚಿಕೆ ಸಂಬಂಧ ಎನ್‌ಡಿಎ ಮೈತ್ರಿಯಲ್ಲಿ ಅಪಸ್ವರ ಎದ್ದಿರುವ ನಡುವೆ ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಜೆಡಿ(ಯು) ಅಭ್ಯರ್ಥಿಗಳ ಪಟ್ಟಿಯನ್ನು ಬಿಡು ಗಡೆಗೊಳಿಸಿದೆ. ಎನ್‌ಡಿಎ ಮೈತ್ರಿಕೂಟದಲ್ಲಿ ಬಿಜೆಪಿ ಹಾಗೂ ಜೆಡಿಯು ತಲಾ 101 ಕ್ಷೇತ್ರಗಳಲ್ಲಿ ಸ್ಪರ್ಧಿಸಲಿವೆ. ಉಳಿದ ಕ್ಷೇತ್ರಗಳನ್ನು ಮೈತ್ರಿಕೂಟದ ಇತರ ಪಕ್ಷಗಳಿಗೆ ಬಿಟ್ಟುಕೊಡಲಾಗಿದೆ.

ಎಲ್‌ಜೆಪಿ (ರಾಮ್ ವಿಲಾಸ್) 29, ಹಿಂದೂಸ್ತಾನಿ ಅವಾಮ್ ಮೋರ್ಚಾ (ಎಚ್‌ಎಎಂ) ಮತ್ತು ರಾಷ್ಟ್ರೀಯ ಲೋಕ ಮೋರ್ಚಾ (ಆರ್‌ಎಲ್‌ಎಂ) ಪಕ್ಷಗಳಿಗೆ ತಲಾ ಆರು ಸ್ಥಾನಗಳನ್ನು ನೀಡಲಾಗಿದೆ. ಆದರೆ ಸೀಟು ಹಂಚಿಕೆ ಬಗ್ಗೆ ಎಚ್‌ಎಎಂ ಹಾಗೂ ಆರ್‌ಎಲ್‌ಎಂ ಪಕ್ಷಗಳ ನಾಯಕರು ಈಗಾಗಲೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬಿಹಾರ ವಿಧಾನಸಭೆ ಚುನಾವಣೆ ನ.6 ಹಾಗೂ 11ರಂದು ಎರಡು ಹಂತಗಳಲ್ಲಿ ನಡೆಯಲಿದೆ. ನ.14ರಂದು ಮತ ಎಣಿಕೆ ನಡೆದು ಫಲಿತಾಂಶ ಪ್ರಕಟಗೊಳ್ಳಲಿದೆ.

## 150ಕ್ಕಿಂತ ಕಡಿಮೆ ಸ್ಥಾನಗಳನ್ನು ಗೆದ್ದರೆ ಅದು ತಮಗೆ ವೈಯಕ್ತಿಕ ಸೋಲು

# ಚುನಾವಣಾ ಕಣದಿಂದ ಹಿಂದೆ ಸರಿದ ಪ್ರಶಾಂತ್ ಕಿಶೋರ್

• ಪ್ರಜೋದಯ ವರದಿ



**ಪಾಟ್ನಾ:** ಚುನಾವಣಾ ಚಾಣಕ್ಯ ಎಂದೇ ಖ್ಯಾತರಾದ ಜನ ಸುರಾಜ್ ಪಕ್ಷದ ಸಂಸ್ಥಾಪಕ ಪ್ರಶಾಂತ್ ಕಿಶೋರ್, ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ತಾವು ಸ್ಪರ್ಧಿ ಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಚುನಾವಣೆಯಲ್ಲಿ ನಾನು ಸ್ಪರ್ಧಿಸುತ್ತಿಲ್ಲ, ಇದು ಪಕ್ಷದ ನಿರ್ಧಾರ. ಪಕ್ಷದ ಬೃಹತ್ ಹಿತಾ ಸಕ್ತಿಗಾಗಿ ನಾನು ಸಂಘಟನಾ ಕಾರ್ಯ ಮುಂದುವರಿಸುತ್ತೇನೆಂದು ವಿವರಿಸಿದ್ದಾರೆ. ಪಕ್ಷದ ಸಂಘಟನಾತ್ಮಕ ಕಾರ್ಯಗಳಲ್ಲಿಯೇ ತಮ್ಮನ್ನು ತೊಡಗಿಸಿಕೊಳ್ಳುವುದಾಗಿ ಅವರು ತಿಳಿಸಿದ್ದಾರೆ. ಬಿಹಾರ ವಿಧಾನಸಭೆಗೆ ನ.6 ಮತ್ತು 11 ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಆರ್‌ಜೆಡಿ ಮುಖ್ಯಸ್ಥ, ವಿಪಕ್ಷಗಳ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಯಾದವ್ ವಿರುದ್ಧ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ ಎಂದು ಹೇಳಲಾಗಿತ್ತು.

243 ಸದಸ್ಯ ಬಲದ ವಿಧಾನಸಭೆಗೆ ನಡೆಯಲಿರುವ ಚುನಾವಣೆಯಲ್ಲಿ ಗೆಲುವಿನ ಗುರಿಯ ಬಗ್ಗೆ ಮಾತನಾಡಿದ ಅವರು, 150ಕ್ಕಿಂತ ಕಡಿಮೆ ಸ್ಥಾನಗಳನ್ನು ಗೆದ್ದರೆ ಅದು ತಮಗೆವೈಯಕ್ತಿಕಸೋಲು ಎಂದು ಅಭಿಪ್ರಾಯಪಟ್ಟಿದ್ದಾರೆ.

ಜನ ಸುರಾಜ್ ಪಕ್ಷವು 150ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆದರೆ, ಅದು ಬಿಹಾರದ ಜನರ ನಿಜವಾದ ಗೆಲುವಾ ಗಲಿದೆ. ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ರಾಜ್ಯದ 100 ಅತ್ಯಂತ ಭ್ರಷ್ಟ ನಾಯಕರನ್ನು ಗುರುತಿಸಿ ಅವರನ್ನು ವಿಚಾರಣೆಗೆ ಒಳಪಡಿಸಿ ಶಿಕ್ಷೆ ನೀಡಲು ಹೊಸ ಕಾನೂನು ಜಾರಿಗೆ ತರಲಾಗುವುದೆಂದು ಪ್ರಶಾಂತ್ ಕಿಶೋರ್ ಭರವಸೆ ನೀಡಿದ್ದಾರೆ.

**ಆರ್‌ಜೆಡಿ ವ್ಯಂಗ್ಯ**

ಬಿಹಾರ ವಿಧಾನಸಭಾ ಚುನಾವಣೆಯಿಂದ ಜನ ಸುರಾಜ್ ಪಕ್ಷದ ಸಂಸ್ಥಾಪಕ, ಚುನಾವಣಾ ತಂತ್ರಜ್ಞ ಪ್ರಶಾಂತ್ ಕಿಶೋರ್ ಹಿಂದೆ ಸರಿದಿದ್ದು, ಯುದ್ಧ ಭೂಮಿಗೆ ಹೋಗುವ ಮೊದಲೇ ಸೋಲನ್ನು ಒಪ್ಪಿಕೊಂಡಿದ್ದಾರೆಂದು ಆರ್‌ಜೆಡಿ ಪಕ್ಷ ವ್ಯಂಗ್ಯ ಮಾಡಿದೆ. ಚುನಾವಣೆಯಲ್ಲಿ ಸ್ಪರ್ಧಿಸುವ ಮೊದಲೇ ಕಿಶೋರ್ ಸೋಲನ್ನು ಒಪ್ಪಿಕೊಂಡಿದ್ದಾರೆಂದು ಅಪಹಾಸ್ಯ ಮಾಡಿದೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಅವರು ಮತ್ತು ಅವರ ಪಕ್ಷ ಹೀನಾಯ ಸೋಲನ್ನು ಅನುಭವಿಸಲಿದೆಯೆಂದು ಕಿಶೋರ್ ಅರಿತುಕೊಂಡಿದ್ದಾರೆ. ಹೀಗಾಗಿಯೇ ಅವರು ಸ್ಪರ್ಧಿಸುತ್ತಿಲ್ಲ ಎಂದು ಘೋಷಿಸಿದ್ದಾರೆ.

ರಾಜಕೀಯ ಪಕ್ಷಗಳಿಗೆ ಸಲಹೆ ನೀಡುವಷ್ಟು ಸುಲಭವಲ್ಲ ರಾಜಕೀಯ ಎಂಬುದನ್ನು ಕಿಶೋರ್ ಅರಿತುಕೊಳ್ಳಬೇಕೆಂದು ಆರ್‌ಜೆಡಿ ವಕ್ತಾರ ಮೃತ್ಯುಂಜಯ್ ತಿವಾರಿ ಹೇಳಿದ್ದಾರೆ.

ಚುನಾವಣೆಗೆ ಮೊದಲೇ ಕಿಶೋರ್ ಅವರು ಹಾಗು ಅವರ ಪಕ್ಷ ಸೋಲನ್ನು ಒಪ್ಪಿಕೊಂಡಿದೆ. ಕಿಶೋರ್ ಅವರ ನಿರ್ಧಾರವು ಪಕ್ಷದ ಕಾರ್ಯಕರ್ತರಿಗೆ ಮಾಡಿದ ಅವಮಾನ ಎಂದು ಜೆಡಿಯು ವಕ್ತಾರ ನೀರಜ್ ಕುಮಾರ್ ತಿಳಿಸಿದ್ದಾರೆ.

# ಅಫ್ಘಾನಿಸ್ತಾನದ ಕಂದಹಾರ್ ಮೇಲೆ ಪಾಕ್ ವೈಮಾನಿಕ ದಾಳಿ

• ಪ್ರಜೋದಯ ವರದಿ



**ಕಾಬುಲ್:** ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದ ನಡುವೆ ನಡೆಯುತ್ತಿರುವ ಸಂಘರ್ಷ ಮತ್ತಷ್ಟು ತೀವ್ರಗೊಂಡಿದ್ದು, ಅಫ್ಘಾನಿಸ್ತಾನದ ಕಂದಹಾರ್ ಮೇಲೆ ಪಾಕಿಸ್ತಾನ ವಾಯುದಾಳಿ ನಡೆಸಿದೆ. ಈ ದಾಳಿಯಲ್ಲಿ ಹಲವು ಮಂದಿ ಸಾವಿಗೀಡಾಗಿದ್ದಾರೆಂದು ವರದಿ ತಿಳಿಸಿದೆ.

ಪಾಕಿಸ್ತಾನ ಬುಧವಾರ ಅಫ್ಘಾನಿಸ್ತಾನದ ಕಂದಹಾರ್ ಪ್ರಾಂತ್ಯದಲ್ಲಿ ವಾಯು ದಾಳಿ ನಡೆಸಿದೆ ಎಂದು ಅಫ್ಘಾನ್ ಮತ್ತು ಪಾಕಿಸ್ತಾನ ಅಧಿಕಾರಿಗಳು ಖಚಿತಪಡಿಸಿದ್ದಾರೆ.

ಮಂಗಳವಾರ ಅಫ್ಘಾನ್ ಮತ್ತು ಪಾಕಿಸ್ತಾನ ಪಡೆಗಳ ನಡುವೆ ನಡೆದ ಘರ್ಷಣೆಯಲ್ಲಿ ಅಫ್ಘಾ ನಿಸ್ತಾನದಲ್ಲಿ 12ಕ್ಕೂ ಹೆಚ್ಚು ನಾಗರಿಕರು ಸಾವಿಗೀಡಾಗಿದ್ದಾರೆಂದು ವರದಿಯಾಗಿತ್ತು. ಆದರೆ, ಬುಧವಾರ ಮಧ್ಯಾಹ್ನದ ವರದಿ ಪ್ರಕಾರ ಪಾಕಿಸ್ತಾನಿ ಸೇನೆಯು ಕನಿಷ್ಠ 40 ಮಂದಿ ಅಫ್ಘಾನಿಸ್ತಾನದ ತಾಲಿಬಾನ್ ದಾಳಿಕೋರರನ್ನು ಕೊಂದಿದೆ ಎಂದು ವರದಿಯಾಗಿದೆ.

ಪಾಕಿಸ್ತಾನದಲ್ಲಿ ದಾಳಿಗಳನ್ನು ಹೆಚ್ಚಿಸಿರುವ ಭಯೋತ್ಪಾದಕರ ವಿರುದ್ಧ ಕ್ರಮ ಕೈಗೊಳ್ಳ ಬೇಕೆಂದು ಅಫ್ಘಾನಿಸ್ತಾನದ ತಾಲಿಬಾನ್ ಸರ್ಕಾರವನ್ನು ಪಾಕಿಸ್ತಾನ ಒತ್ತಾಯಿಸಿತ್ತು. ಅಫ್ಘಾನಿಸ್ತಾನದಿಂದಲೇ ಉಗ್ರರು ಕಾರ್ಯಾಚರಿಸುತ್ತಿದ್ದಾರೆಂದು ಪಾಕಿಸ್ತಾನ ಹೇಳಿತ್ತು. ಅದಾದ ಬಳಿಕ ಈ ಬೆಳವಣಿಗೆ ನಡೆದಿದೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

C M Y K C M Y K C M Y K C M Y K